ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ರಾಯಚೂರಿನಿಂದ ರಾಜ್ಯದವರೆಗೆ

ಕನ್ನಡದಿನ ಪತ್ರಿಕೆ

ಸಂಪಾದಕರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issuse : 171 | ದಿನಾಂಕ : 21-04-2026 Date : 21-04-2026 | ಮಂಗಳವಾರ Tuesday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ಹವಾಮಾನ ವೈಪರೀತ್ಯ : ನಾಲ್ಕು ತಾಸು ಆಕಾಶದಲ್ಲಿ ಹಾರಾಡಿ ಬೆಂಗಳೂರಿನಲ್ಲಿ ಸುರಕ್ಷಿತವಾಗಿ ಲ್ಯಾಂಡ್ ಆದ ವಿಮಾನ

**ಹುಬ್ಬಳ್ಳಿ,ಏ.20**-ಹೈದರಾಬಾದ್‌ನಿಂದ ಹುಬ್ಬಳ್ಳಿಗೆ ಬರುತ್ತಿದ್ದ **Fly91** ವಿಮಾನವು ಹವಾಮಾನ ವೈಪರೀತ್ಯದಿಂದಾಗಿ ಲ್ಯಾಂಡ್ ಆಗಲು ವಿಫಲವಾಗಿತ್ತು. ಸುಮಾರು ನಾಲ್ಕು ಗಂಟೆಗಳ ಕಾಲ ಆಗಸದಲ್ಲೇ ಸುತ್ತಾಡಿ ಕೊನೆಗೆ ಬೆಂಗಳೂರಿನಲ್ಲಿ ಸುರಕ್ಷಿತವಾಗಿ ಲ್ಯಾಂಡ್ ಆದ ಘಟನೆ ಭಾನುವಾರ ರಾತ್ರಿ ನಡೆದಿದೆ.

ಹೈದರಾಬಾದ್‌ನಿಂದ ಹುಬ್ಬಳ್ಳಿಗೆ ಬರುತ್ತಿದ್ದ **Fly91** ಏರ್ಲೈನ್ಸ್ **IC3401** ನಿಗದಿಯಂತೆ ಭಾನುವಾರ ಸಂಜೆ 4.30ಕ್ಕೆ ಲ್ಯಾಂಡ್ ಆಗಬೇಕಿತ್ತು. ಹವಾಮಾನ ವೈಪರೀತ್ಯದಿಂದ ವಿಮಾನಕ್ಕೆ ಲ್ಯಾಂಡ್ ಆಗಲು ಸಾಧ್ಯವಾಗದೆ, ಮುಂಡಗೋಡ, ದಾವಣಗೆರೆ, ಶಿವಮೊಗ್ಗ ಬಳಿ ಆಗಸದಲ್ಲಿಯೇ ಸುತ್ತಾಡಿತ್ತು.

ಇದರಿಂದ ವಿಮಾನದಲ್ಲಿದ್ದ 18 ಪ್ರಯಾಣಿಕರು ಆತಂಕಕ್ಕೆ ಒಳಗಾಗಿದ್ದರು. ಕೊನೆಗೆ ವಿಮಾನ ಬೆಂಗಳೂರಿನ ಏರ್‌ಪೋರ್ಟನಲ್ಲಿ ಸಂಜೆ 7.30ಕ್ಕೆ ಲ್ಯಾಂಡ್ ಆಯಿತು. ಆದ್ರೆ ಯಾವುದೇ ತಾಂತ್ರಿಕ ದೋಷ ಕಂಡುಬಂದಿಲ್ಲ' ಎಂದು ಹುಬ್ಬಳ್ಳಿ ವಿಮಾನ ನಿಲ್ದಾಣ ನಿರ್ದೇಶಕ ರೂಪೇಶ ↘ 4

## ಬಸವ ಜಯಂತಿ: ಸಮ ಸಮಾಜ ನಿರ್ಮಾಣ ಕನಸು ಸಾಕಾರಕ್ಕೆ ಬಸವಣ್ಣನವರೇ ಪ್ರೇರಣೆ-ಡಾ.ಶಿವರಾಜ ಪಾಟೀಲ್

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.20**-ಬಸವಣ್ಣನವರು 12ನೇ ಶತಮಾನದಲ್ಲಿ ಸಮ ಸಮಾಜ ನಿರ್ಮಾಣಕ್ಕಾಗಿ ಶ್ರಮಿಸಿ, ಅನುಭವ ಮಂಟಪದಲ್ಲಿ ಎಲ್ಲರನ್ನೂ ಒಗ್ಗೂಡಿಸಕೊಂಡು ಹೋಗುವ ಕೆಲಸ ಮಾಡಿದ್ದರೂ ಆದರೆ, ಇದೀಗ ಸಮಾಜವನ್ನು ಬಿಟ್ಟು ಕೆಲಸ ಮಾಡುತ್ತಿದ್ದು ಸಮಾಜದವರು ಜಾಗೃತಿರಾಗಬೇಕು ಎಂದು ಶಾಸಕ ಶಿವರಾಜ ಪಾಟೀಲ್ ಹೇಳಿದರು.

ಅವರಿಂದು ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾ ನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ವೀರಶೈವ ಲಿಂಗಾಯತ ಅಂಗ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಜಗಜ್ಯೋತಿ ಬಸವೇಶ್ವರ ಜಯಂತಿ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು,

ಬಸವಣ್ಣನವರು 12ನೇ ಶತಮಾನದಲ್ಲಿ ಅನುಭವ ಮಂಟಪದಲ್ಲಿ ಎಲ್ಲರನ್ನೂ ಒಗ್ಗೂಡಿಸಿಕೊಂಡು ಹೋಗುವುದರ ಜೊತೆಗೆ ಸಮ ಸಮಾಜ ನಿರ್ಮಾಣಕ್ಕೆ ಶ್ರಮಿಸಿದರು, ಒಗ್ಗಟ್ಟಿನಿಂದ ಎಲ್ಲರೂ ಹೋಗಬೇಕಾಗಿದೆ, ಆದರೆ ಇಂದು ಸಮಾಜವನ್ನು ಬಿಟ್ಟು ಕೆಲಸ



ಮಾಡುತ್ತಿದ್ದಾರೆ, ಸಮಾಜದವರು ಎಚ್ಚೆತ್ತುಕೊಂಡು ಜಾಗೃತಿರಾಗಬೇಕು ಎಂದರು.

ಕಾವ್ಯಾನಂದ, ಬ್ರಹ್ಮಾನಂದ, ಕಾಂತಾನಂದ ಈ ಮೂರು ಆನಂದಗಳು ಮೊಬೈಲ್ ಕಿತ್ತುಕೊಂಡಿದೆ, ಹೆಚ್ಚಿನ ಸಮಯದಲ್ಲಿ ಮೊಬೈಲ್‌ನಲ್ಲಿ ಕಳೆಯುತ್ತಿದ್ದೇವೆ, ಇಂದು ಮಕ್ಕಳ ಮೇಲೆ ಹೆಚ್ಚಿನದಾಗಿ ಮೊಬೈಲ್ ಮೊರೆ ಹೋಗುತ್ತಿದ್ದು ಇದನ್ನು ತಪ್ಪಿಸಿದಾಗ ಮಾತ್ರ ನಮ್ಮ ಮಕ್ಕಳ ಭವಿಷ್ಯದ ರೂಪಿಸಲು ಸಾಧ್ಯವೆಂದರು.

ಕಲ್ಯಾಣ ಮಂಟಪವು 10 ಕೋಟಿ ರೂ ವೆಚ್ಚದಲ್ಲಿ ನಿರ್ಮಾಣ ವಾಗುತ್ತಿದ್ದು, ಹಂಪನಗೌಡ ಬಾದರ್ಲಿ ಅವರು 5 ಕೋಟಿ ರೂ ಅನುದಾನ ನೀಡಿದ್ದಾರೆ. ಏ.22 ರಂದು ಬೆಳಗ್ಗೆ ಭೂಮಿ ಪೂಜೆ ಇದ್ದು ಎಲ್ಲರೂ ಭಾಗವಹಿಸಲು ತಿಳಿಸಿದರು.

ಜಿಲ್ಲಾಧಿಕಾರಿ ನಿತೀಶ್. ಕೆ ಮಾತನಾಡಿ, ಬಸವಣ್ಣನವರು 12ನೇ ಶತಮಾನದಲ್ಲಿ ಮೂಡನಂಬಿಕೆ, ವಿರುದ್ಧ ಪ್ರಶ್ನಿಸಿ ತಮ್ಮ ತತ್ವಗಳ ಮೂಲಕ ಅನಿಷ್ಟ ಪದ್ಧತಿಗಳ ವಿರುದ್ಧ ವಚನಗಳ ಮೂಲಕ ಜಾಗೃತಿ ಮೂಡಿಸಿದವರು, ಸಮಾಜದ ಸುಧಾರಣೆಗೆ, ಸಮ ಸಮಾಜ ನಿರ್ಮಾಣ, ಶೋಷಿತರ ನ್ಯಾಯವನ್ನು ಒದಗಿಸಿದವರು ಎಂದರು.

ಬಸವಣ್ಣನವರ ವಿರುದ್ಧ ಪಟ್ಟಬದ್ರ, ಇತಾಸಕ್ತಿಗಳಿಂದ ಅನೇಕ ತೊಂದರೆಗಳನ್ನು ಅನುಭವಿಸಿದರೂ ತಮ್ಮ ಕಾಯಕದ ಮೂಲಕ ತಮ್ಮ ಕೆಲಸ ಪ್ರಾಮಾಣಿಕವಾಗಿ ಮಾಡಿದರು, ಮೇಲು ಕೀಳೆಂಬ ಭಾವನೆ ತೋರದೆ, ಬೇದಭಾವ ಮಾಡದೇ ಎಲ್ಲರನ್ನೂ ಒಗ್ಗೂಡಿಸಿಕೊಂಡು ಹೋಗುವು ಕೆಲಸ ಮಾಡಿದ್ದರು.

ತಂತ್ರಜ್ಞಾನದ ಯುಗದಲ್ಲಿಯೂ ಬಸವಣ್ಣನವರ ತತ್ವಾದರ್ಶಗಳು ನಮಗೆ ↘ 4

## ಶಾಸಕ ಎನ್.ಎ ಹ್ಯಾರಿಸ್‌ಗೆ ಸಂಬಂಧಿಸಿದ ಸ್ಥಳಗಳ ಮೇಲೆ ಇಡಿ ದಾಳಿ

**ಬೆಂಗಳೂರು,ಏ.20**-ಶಾಂತಿನಗರ ಕ್ಷೇತ್ರದ ಕಾಂಗ್ರೆಸ್ ಶಾಸಕ ಎನ್.ಎ.ಹ್ಯಾರಿಸ್ ಅವರ ಮನೆ, ಕಚೇರಿ ಸೇರಿದಂತೆ ವಿವಿಧ ಸ್ಥಳಗಳ ಮೇಲೆ ಸೋಮವಾರ ಬೆಳಗ್ಗೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಹ್ಯಾರಿಸ್ ಅವರ ಅಶೋಕನಗರದ ನಿವಾಸ, ಹ್ಯಾರಿಸ್ ಅವರ ಪುತ್ರ ಮೊಹಮ್ಮದ್ ನಲಪಾಡ್ ನಿವಾಸ ಸೇರಿದಂತೆ ಸುಮಾರು ಐದಕ್ಕೂ ಅಧಿಕ ಸ್ಥಳಗಳ ಮೇಲೆ ಏಕಕಾಲದಲ್ಲಿ ದಾಳಿ ನಡೆಸಲಾಗಿದ್ದು, ಪರಿಶೀಲನೆ ಮುಂದುವರೆದಿದೆ.

ರಾಜ್ಯದಲ್ಲಿ ಸಾಕಷ್ಟು ಸುದ್ದಿಯಾಗಿದ್ದ ಬಹುಕೋಟಿ ಬಿಟ್ ಕಾಯಿನ್ ಹಗರಣದ ಪ್ರಮುಖ ಆರೋಪಿ, ಶ್ರೀಕೃಷ್ಣ ಅಲಿಯಾಸ್ ಶ್ರೀಕಿ ಜೊತೆ ವ್ಯವಹಾರಿಕ ನಂಟು ಹೊಂದಿರುವ್ ಆರೋಪ ಮೊಹಮ್ಮದ್ ↘ 4

## ಬಸವ ಜಯಂತಿ ಅಂಗವಾಗಿ ಸಚಿವ ಬೋಸರಾಜ, ಶಾಸಕ ಡಾ.ಶಿವರಾಜ ಪಾಟೀಲ್ ಸೇರಿ ಗಣ್ಯರಿಂದ ಮಾಲಾರ್ಪಣೆ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.20**-ಜಗಜ್ಯೋತಿ ಬಸವೇಶ್ವರ ಜಯಂತಿ ಅಂಗವಾಗಿ ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜ, ಶಾಸಕ ಡಾ.ಶಿವರಾಜ ಪಾಟೀಲ್ ಸೇರಿದಂತೆ ಅನೇಕ ಗಣ್ಯರು ಬಸವೇಶ್ವರ ವೃತ್ತದಲ್ಲಿ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು.

ಜಿಲ್ಲಾಧಿಕಾರಿ ನಿತೀಶ.ಕೆ. ಎಸ್‌ಪಿ ಅರುಣ್ಣಾಂಗಿರಿ ಸೇರಿದಂತೆ ಅನೇಕರು ಮಾಲಾರ್ಪಣೆ ಮಾಡಿದರು. ಸಚಿವ ಎನ್.ಎಸ್.ಬೋಸರಾಜರೊಂದಿಗೆ ಪಾಲಿಕೆ ಮಾಜಿ ಸದಸ್ಯ ಜಯಣ್ಣ,ಅಮರೇಗೌಡ ಹಂಚಿನಾಳ, ಮಹಾನಂದ , ಮಹ್ಮದ ಶಾಲಂ, ರುದ್ರಪ್ಪ ಅಂಗಡಿ ಸೇರಿದಂತೆ ಅನೇಕರಿದ್ದರು.

ಸೋಮವಾರಪೇಟೆ ಹಿರೇಮಠದ ಶ್ರೀ ಅಭಿನವರ ರಾಚೋಟಿ ವೀರ ಶಿವಾಚಾರ್ಯರು ಮಾಲಾರ್ಪಣೆ ಮಾಡಿದರು. ಶಾಸಕ ಡಾ.ಶಿವರಾಜ ಪಾಟೀಲ್,ವೀರಶೈವ ಲಿಂಗಾಯತ ಸಮಾಜ ಅಧ್ಯಕ್ಷ ಶರಣಭೂಪಾಲ ನಾಡಗೌಡ, ಮುಕ್ತಿಯಾರ, ಕಡ ಗೋಳ ಆಂಜಿನಯ್ಯ ಸೇರಿ ಅನೇಕರಿದ್ದರು. ಮಹಾನಗರ ಪಾಲಿಕೆ ಆಯುಕ್ತ ಜೋಬಿನ್ ಮಹೋಪಾತ್ರ ಮಾರ್ಲಾರ್ಪಣೆ ↘ 4

## ಬಿಜೆಪಿ ನಗರ ಮಂಡಲ ಪದಾಧಿಕಾರಿಗಳ ಆಯ್ಕೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.20**- ಬಿಜೆಪಿ ನಗರ ಮಂಡಲದ ಪದಾಧಿಕಾರಿಗಳನ್ನು ಅಧ್ಯಕ್ಷ ಉಟ್ಕೂರು ರಾಘವೇಂದ್ರ ಅವರು ಆಯ್ಕೆ ಮಾಡಿದರು.

ಉಪಾಧ್ಯಕ್ಷರಾಗಿ ಪಲಗುಲು ನಾಗರಾಜ, ಎ.ಚಂದ್ರಶೇಖರ, ರಾಮಚಂದ್ರ ಕಡಗೋಲ್, ಸಾಗವೇಣಿ ಸಾಹುಕಾರ, ಸಂಗೀತ ಜಗತಾಪ, ವಿಜ್ಞಾನ ವೆಂಕಟೇಶ.

ಪ್ರಧಾನ ಕಾರ್ಯದರ್ಶಿಯಾಗಿ ಪ್ರದೀಪ್ ಸಾನಬಾಳ, ಮೌನೇಶ, ಕಾರ್ಯದರ್ಶಿಯಾಗಿ ಶಿವರೆಡ್ಡಿ, ವೀರ ಪ್ರಕಾಶ ಸುಶ್ಮಾ, ಶಿವ ಲಕ್ಷ್ಮೀ, ರಾಧಾದೇವಿ,

ವೇಣುಗೋಪಾಲ.ಕೋಶಾಧ್ಯಕ್ಷರಾಗಿ ಲಕ್ಷ್ಮೀಕಾಂತ್ ಜವಾರ,

ಕಾರ್ಯಾಲಯ ಕಾರ್ಯದರ್ಶಿಯಾಗಿ ವೀರೇಶ ತಾಲವಾರ್ ಅವರನ್ನು ಆಯ್ಕೆ ಮಾಡಿದ್ದಾರೆ.

## ಕ್ಷೇತ್ರ ಮರುವಿಂಗಡಣೆಯನ್ನು ಹೊಸ ಜನಗಣತಿಯಾದ ನಂತರ ಮಾಡುವುದು ಸೂಕ್ತ: ಸಿಎಂ ಸಿದ್ದರಾಮಯ್ಯ ಅಭಿಮತ



**ಮೈಸೂರು,ಏ.20**-ಕ್ಷೇತ್ರ ಮರುವಿಂಗಡಣೆಯನ್ನು ಹೊಸ ಜನಗಣತಿಯಾದ ನಂತರ ಮಾಡುವುದು ಸೂಕ್ತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯ ವ್ಯಕ್ತಪಡಿಸಿದರು.

ಎರಡು ದಿನಗಳ ಪ್ರವಾಸ ನಿಮಿತ್ತ ಮೈಸೂರಿಗೆ ಆಗಮಿಸಿದ ಸಂದರ್ಭದಲ್ಲಿ ಮಾಧ್ಯಮದವರ ಜೊತೆ ಅವರು ಮಾತನಾಡಿದರು. ಕ್ಷೇತ್ರ ಮರುವಿಂಗಡಣೆಯನ್ನು ಹೊಸ ಜನಗಣತಿಯಾದ ನಂತರ ಕ್ಷೇತ್ರ ಮರು ವಿಂಗಡಣೆ ಮಾಡುವುದು ಸೂಕ್ತ. ನಾವು ಅದಕ್ಕಾಗಿಯೇ ಕ್ಷೇತ್ರ ಮರು ವಿಂಗಡಣೆಯನ್ನು ವಿರೋಧ ಮಾಡಿದೆವು. ನಾವು ಎಂದಿಗೂ ಮಹಿಳಾ ಮೀಸಲಾತಿಯ ಪರವಾಗಿಯೇ ಇದ್ದೇವೆ ಎಂದರು.

ಇ ಲ್ಲಿ ಯ ಎ ವ ' ರ ' ಗ ' ↘ 4

### ಜನಗಣತಿದಾರರಿಗೆ 15 ಸಾವಿರ ಓಆರ್‌ಎಸ್ ಪ್ಯಾಕೇಟ್ ಪೂರೈಕೆ

## ವಾಣಿಜ್ಯೋದ್ಯಮ ಸಂಘ, ಐಎಂಐ ಕಾರ್ಯ ಮಾದರಿಯಾಗಿದೆ-ಜೋಬಿನ್ ಮಹೋಪಾತ್ರ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.20**-ನಗರದಲ್ಲಿ ಹೆಚ್ಚುತ್ತಿರುವ ತಾಪಮಾನದಿಂದ ಹಿನ್ನಲೆಯಲ್ಲಿ ಮನೆ ಮನೆ ಜನಗಣತಿ ಮಾಡುವ ಸಿಬ್ಬಂದಿಗಳಿಗೆ ರಾಯುಚೂರು ವಾಣಿಜ್ಯೋಧ್ಯಮ ಸಂಘ ಹಾಗೂ ಎಎಂಐಗಳ ಸಹಯೋಗದಲ್ಲಿ 15 ಸಾವಿರ ಓಆರ್‌ಎಸ್ ಪ್ಯಾಕೇಟ್ ದೇಣಿಗೆಯಾಗಿ ನೀಡಿರುವದ ಸಂಘಗಳ ಜನಪರ ಕಾಳಜಿ ತೋರಿಸುತ್ತದೆ ಎಂದು ಮಹಾನಗರ ಪಾಲಿಕೆ ಆಯುಕ್ತ ಜೋಬಿನ್ ಮಹೋಪಾತ್ರ ಹೇಳಿದರು.

ಅವರಿಂದು ಮಹಾನಗರ ಪಾಲಿಕೆ ಕಚೇರಿಯಲ್ಲಿ ರಾಯಚೂರು ವಾಣಿಜ್ಯೋಧ್ಯಮ ಸಂಘ ಹಾಗೂ ಐಎಂಎ ಪದಾಧಿಕಾರಿಗಳು ಓಆರ್‌ಎಸ್ ಪ್ಯಾಕೇಟ್‌ಗಳನ್ನು ಆಯುಕ್ತರಿಗೆ ಹಸ್ತಾಂತರಿಸಿದರು. ನಗರದಲ್ಲಿ



ಮನೆ ಮನೆ ಜನಗಣತಿ ಪ್ರಾರಂಭವಾಗಿದ್ದು ಮನೆಗೆ ಬರುವ ಗಣತಿದಾರರಿಗೆ ಸಮರ್ಪಕ ಮಾಹಿತಿ ನೀಡಿ ಸಾರ್ವಜನಿಕರು ಸಹಕರಿಸಬೇಕೆಂದರು. ಗಣತಿದಾರರಿಗೆ ಅನುಕೂಲವಾಗುವಂತೆ ಬಿಸಿಲಿನ ತಾಪದಿಂದ ರಕ್ಷಿಸಲು ಓಆರ್‌ಎಸ್ ಪ್ಯಾಕೇಟ್ ನೀಡಿರುವದು ಸ್ವಾಗತಾರ್ಹವಾಗಿದೆ ಎಂದರು. ↘ 4

## ಬಸವ ಜಯಂತಿ : ಪುತ್ಥಳಿಗೆ ಮಾಲಾರ್ಪಣೆ ಆಸ್ಪತ್ರೆಯಲ್ಲಿ ಹಣ್ಣುಹಂಪಲು ವಿತರಣೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.20**-ನುಡಿದಂತೆ ನಡೆ ಈ ಜನ್ಮ ಕಡೆ ಎಂಬ ಅದ್ಭುತವಾದ ವಚನಾಮೃತ ನೀಡಿದ ಜಗಜ್ಯೋತಿ ಬಸವೇಶ್ವರ ಅವರ ಜಯಂತಿ ಅಂಗವಾಗಿ ಕೆಪಿಸಿಸಿ ಹಿಂದುಳಿದ ವರ್ಗದ ಉಪಾಧ್ಯಕ್ಷ ತಲಕಾಯ ಮಾರಪ್ಪ ಅವರು ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಮನ ಸಲ್ಲಿಸಿದರು.

ನಂತರ ಅವರು ಜಿಲ್ಲಾ ಆಸ್ಪತ್ರೆಗೆ ತೆರಳಿ ರೋಗಿಗಳಿಗೆ ಹಣ್ಣು ಹಂಪಲ ನೀಡಿ ಶೀಘ್ರ ಗುಣಮುಖರಾಗಲು ಕಾಯಕಯೋಗಿ ಬಸವಣ್ಣ ಅವರಲ್ಲಿ ಪ್ರಾರ್ಥನೆ ಮಾಡಿದರು.

ಈ ಸಂದರ್ಭದಲ್ಲಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿ, ಬಸವಣ್ಣ ಅವರು ಕ್ರಾಂತಿಕಾರಿ ಪುರುಷ. ಈ ನೆಲದಲ್ಲಿ ಬಲವಾಗಿ ಬೇರೂರಿದ್ದ ಮೂಢನಂಬಿಕೆಗಳನ್ನು ತೊಡೆದುಹಾಕಿ ವಚನಗಳ ಮೂಲಕ ಸಾಮಾಜಿಕ ನ್ಯಾಯ ಅಸಮಾನತೆಯ ಅಟ್ಟಹಾಸದ ಸ್ತ್ರೀ ಕುಲಕ್ಕೆ ನ್ಯಾಯ ಕೊಡಿಸಿ, ಕಾಯಕದ ಮಹತ್ವವನ್ನು ಸಾರಿದರು. ಅವರನ್ನು ಕಾಂಗ್ರೆಸ್ ಸರ್ಕಾರ ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿ, ಅವರನ್ನು ವಿಶಿಷ್ಟವಾಗಿ ಗೌರವಿಸಿದೆ



ಅವರ ಸಮಾಜ ಪರಿವರ್ತನೆಯ ತತ್ವ ಸಿದ್ಧಾಂತಗಳೆಂದು ಎಲ್ಲರೂ ಅಳವಡಿಸಿಕೊಳ್ಳಬೇಕು ನುಡಿದಂತೆ ನಡೆಯಬೇಕು ನಿತ್ಯ ಪೂಜೆ ಜಾಗದಲ್ಲಿ ನಿತ್ಯ ಕಾಯಕ ಎಂಬ ತತ್ವವನ್ನು ಜಗತ್ತಿಗೆ ಸಾರಿದ ಧೀಮಂತ ಯುಗಪುರುಷ ಬಸವಣ್ಣ ಎಂದು ನುಡಿದರು.

### ವಾರ್ಡ 33 ರಲ್ಲಿ ಕುಡಿಯುವ ನೀರಿನ ಸಮಸ್ಯೆ

## ಎರಡು ದಿನದಲ್ಲಿ ಪರಿಹರಿಸದಿದ್ದರೆ ಹೋರಾಟ-ಶಂಶಾಲಂ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.20**-ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ 33 ಪೋತ್ನಗಲ್ ಹಾಗೂ ಎಸ್ಸಿ ಕಾಲೋನಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ಕಳೆದ 15 ದಿನಗಳಿಂದ ಸಮರ್ಪಕ ಕುಡಿಯುವ ನೀರು ಪೂರೈಕೆಯಾಗದೇ ಜನರು ಪರದಾಡುವಂತಾಗಿದೆ. ಬಿಸಿಲಿನ ಪ್ರಖರತೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು ಕುಡಿಯಲು ನೀರಿಲ್ಲದಂತಾಗಿದೆ ಎಂದು ಸಾರ್ವಜನಿಕರು ದೂರಿದ್ದಾರೆ.

ಮಹಾನಗರ ಪಾಲಿಕೆ ಮಾಜಿ ಸದಸ್ಯ ನರಸರೆಡ್ಡಿ ಹಾಗೂ ಪಾಲಿಕೆ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮವಾಗಿಲ್ಲ ಎಂದು ಮಹಿಳೆಯರು ದೂರಿದ್ದಾರೆ. ಈ ಕುರಿತು ಮಾಜಿ ಸದಸ್ಯ ಶಂಶಾಲಂ ಇವರು ಶೀಘ್ರವೇ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಪಾಲಿಕೆ ಅಧಿಕಾರಿಗಳು ಮುಂದಾಗಬೇಕೆಂದು ಆಗ್ರಹಿಸಿದ್ದಾರೆ.

ಪೋತಗಲ್ ಬಸ್ ನಿಲ್ದಾಣದ ಬಳಿಯಿಂದ ಎಸ್‌ಸಿ ಕಾಲೋನಿಗೆ 6ಇಂಟು ಪೈಪ್ ಅಳವಡಿಸಿ ನೀರು ಪೂರೈಕೆಗೆ ತುರ್ತು ಕ್ರಮವಹಿಸಬೇಕೆಂದು ಒತ್ತಾಯಿಸಿದ್ದಾರೆ. ಎರಡು ದಿನದಲ್ಲಿ ಕುಡಿಯುವ ನೀರು ಸರಿಪಡಿಸದೇ ಇದ್ದರೆ ಹೆದ್ದಾರಿ ತಡೆದು ಪ್ರತಿಭಟನೆಸುವದಾಗಿ ಶಂಶಾಲಂ ಫಿರಂಗಿ ಎಚ್ಚರಿಸಿದ್ದಾರೆ.

## ಆಸ್ತಿ ವಿವಾದ: ರಸ್ತೆಯಲ್ಲಿ ಪ್ರತಿಭಟನೆ ನಡೆಸಿ ಆತ್ಮಹತ್ಯೆ ಮಾಡಿಕೊಳ್ಳುವದಾಗಿ ಮಹಿಳೆ ಬೆದರಕೆ: ಪೊಲೀಸರ ಮಧ್ಯಸ್ಥಿಕೆ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.20**-ಆಸ್ತಿಗೆ ಸಂಬಂಧಿಸಿದಂತೆ ಮಹಿಳೆಯೊಬ್ಬರಿಗೆ ಅನ್ಯಾಯ ಮಾಡಿರುವ ಕುಟುಂಬಸ್ಥರ ವಿರುದ್ದ ರಸೂಲ್ ಫಂಕ್ಷನ್ ಹಾಲ್ ಬಳಿ ಪ್ರತಿಭಟನೆ ನಡೆಸಿದ್ದರಿಂದ ಕೆಲಕಾಲ ಬಿಗುವಾತಾವರಣ ನಿರ್ಮಾಣವಾದ ಘಟನೆ ಜರುಗಿದೆ.

ತಹೇರಾ ಫರ್ವಿನ್ ಎಂಬ ಎಂಬವವವರಿಗೆ ಅವರ ಚಿಕ್ಕಪ್ಪ ಅಣ್ಣನ ಮಕ್ಕಳಿಗೆ ಸುಳ್ಳು ಭರವಸೆ ನೀಡಿ ಎಲ್ಲ ಹೆಣ್ಣುಮಕ್ಕಳ ಮದುವೆ ಮಾಡುವದಾಗಿ ಹೇಳಿ 10 ತೊಲೆ ಬಂಗಾರ, 10 ಲಕ್ಷ ರೂ ನಗದು ಹಾಗೂ ಆಸ್ತಿ ಬಂಧಿಸಿದ ದಾಖಲೆ ಪಡೆದು ಹಿಂತಿರುಗಿಸದೇ ಮದುವೆಯೂ ಮಾಡದೇ ವಂಚಿಸಿದ್ದಾರೆ. ಹಣ, ಆಸ್ತಿ ದಾಖಲೆ ನೀಡುವಂತೆ ಮಹಿಳೆ ತಹೇರಾ ಫರ್ವಿನ್, ಫ್ರೀಡ್ಜ್ ,ಹಾಗೂ ಚಾಕು ಹಿಡಿದು ರಸ್ತೆಯಲ್ಲಿ ಪ್ರತಿಭಟನೆ ನಡೆಸಿದರು. ವಿಷಯ ತಿಳಿದ ಸದರ ಬಜಾರ ಪೊಲೀಸರು ಮನವೊಲಿಸಲು ಪ್ರಯತ್ನಿಸಿದರು.

ಡಾ. ಹಾಜಿ ಮೊಹ್ಮದ ರಸೂಲ್ ಇವರ ಮನೆ ಮುಂದೆ ಪ್ರತಿಭಟನೆ ನಡೆಸಿದ್ದರಿಂದ ವಾಹನಗಳ ಸಂಚಾರಕ್ಕೆ ಅಡ್ಡಿಯಾಗಿದ್ದಲ್ಲದೇ ಆತ್ಮಹತ್ಯೆ ಮಾಡಿಕೊಳ್ಳುವದಾಗಿ ಹೇಳಿದ್ದರಿಂದ ಬಿಗು ವಾತಾವರಣ ನಿರ್ಮಾಣವಾಗಿತ್ತು.

ಪೊಲೀಸರು ತಹೇರಾ ಫರ್ವಿನ್ ಇವರನ್ನು ಠಾಣೆಗೆ ಕರೆದೊಯ್ದು ವಿಚಾರಣೆ ನಡೆಸಿದ್ದಾರೆ.

# ಪಿಯು ಕಾಲೇಜಿಗೆ ಉತ್ತಮ ಫಲಿತಾಂಶ ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನ

ಕನ್ನಡ ಮಾತೃ ಭೂಮಿ ವಾರ್ತೆ

**ಬೀದರ್, ಏ.20**ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶ -01ರಲ್ಲಿ ಉತ್ತಮ ಫಲಿತಾಂಶ ಪಡೆಯುವ ಮೂಲಕ ನಗರದಲ್ಲಿರುವ ಬಾಬು ಬಿರಾದಾರ ಪದವಿ ಪೂರ್ವ ವಿಜ್ಞಾನ ಕಾಲೇಜಿನ ವಿದ್ಯಾರ್ಥಿಗಳು ಸಾಧನೆಗೈದಿದ್ದಾರೆ. ಕಾಲೇಜಿನ ಎಲ್ಲ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು ಈ ಪೈಕಿ 01 ಅಗ್ರ ಶ್ರೇಣಿ, 13 ಪ್ರಥಮ ದರ್ಜೆ ಮತ್ತು ಉಳಿದ ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಕಾಲೇಜಿನ ಒಟ್ಟಾರೆ ಫಲಿತಾಂಶ ಶೇ 8.14% ಆಗಿದೆ. ಪಿಸಿಎಂಬಿ - 90% ಬಂದಿದೆ ಎಂದು ಕಾಲೇಜಿನ ಅಧ್ಯಕ್ಷ ಆರುಣ ಬಿ. ಬಿರಾದಾರ್ ಅವರು ತಿಳಿಸಿದ್ದಾರೆ.

ಕು. ಲಾವಣ್ಯ ಶೇ. 87 ರಷ್ಟು ಅಂಕ ಗಳಿಸಿ ಅಗ್ರ ಶ್ರೇಣಿಯಲ್ಲಿ ಪಾಸಾಗಿ ಕಾಲೇಜಿಗೆ ಟಾಪರ್ ಆಗಿ ಹೊರಹೊಮ್ಮಿದ್ದಾರೆ. ಉಳಿದ ವಿದ್ಯಾರ್ಥಿಗಳು 84, 83% ಮತ್ತು 80% ಹೀಗೆ ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಪಾಸಾಗಿ ಅಂಕ ಪಡೆದು ಸಾಧನೆ ಮಾಡಿದ್ದಾರೆ. ಎಂದು ಮಾಹಿತಿ ನೀಡಿ ಆಡಳಿತ ಮಂಡಳಿಯವರು ಹರ್ಷ ವ್ಯಕ್ತಪಡಿಸಿದ್ದಾರೆ.

ಕಾಲೇಜಿನಲ್ಲಿ ಉತ್ತಮ ಶೈಕ್ಷಣಿಕ ವಾತಾವರಣ, ಗುಣಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ. ಹಾಗೂ ಸಿಇಟಿ. ನೀಟ್, ಜೆಇಇ ಇತರೆ ಸ್ಪರ್ಧಾತ್ಮಕ ಸ್ಪರ್ಧೆಯಲ್ಲಿ ಭಾಗವಹಿಸಲು ತರಬೇತಿ ನೀಡಲಾಗುತ್ತಿದೆಂದು ಕಾಲೇಜಿನ ಆಡಳಿತ ಮಂಡಳಿಯವರು ತಿಳಿಸಿದ್ದಾರೆ. ಸಾಧನೆಗೈದ ವಿದ್ಯಾರ್ಥಿಗಳಿಗೆ ಪ್ರಾಂಶುಪಾಲರು, ಉಪನ್ಯಾಸಕರು, ಪಾಲಕರು ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.

# ಸಮಯ ಪ್ರಜ್ಞೆ : ತಪ್ಪಿದ ಎರಡು ಬಾಲ್ಯ ವಿವಾಹ, ಇಬ್ಬರು ಬಾಲಕಿಯರ ರಕ್ಷಣೆ

ಕನ್ನಡ ಮಾತೃ ಭೂಮಿ ವಾರ್ತೆ

**ಕೊಪ್ಪಳ,ಏ.20-** ಜಿಲ್ಲೆಯಲ್ಲಿ ನಡೆಯುತ್ತಿದ್ದ ಎರಡು ಪ್ರತ್ಯೇಕ ಬಾಲ್ಯ ವಿವಾಹಗಳನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಡಿಯಲ್ಲಿ ಕಾರ್ಯನಿರ್ವಹಿಸುವ ಮಕ್ಕಳ ಉಚಿತ ಸಹಾಯವಾಣಿ ಸಂಖ್ಯೆ 1098ಕ್ಕೆ ಬಂದ ಖಚಿತ ಮಾಹಿತಿ ಮೇರೆಗೆ ಇಬ್ಬರು ಅಪ್ರಾಪ್ತರನ್ನು ಹಸಿಮಣೆ ಏರುವ ಮುನ್ನವೇ ರಕ್ಷಿಸಲಾಗಿದೆ.

ಕನಕಗಿರಿ ತಾಲೂಕಿನ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ 8ನೇ ತರಗತಿ ಓದುತ್ತಿದ್ದ ಬಾಲಕಿಗೆ ಮದುವೆ ಮಾಡಲು ಪೋಷಕರು ನಿರ್ಧರಿಸಿದ್ದು, ವರನ ಕುಟುಂಬ ಆರ್ಥಿಕವಾಗಿ ಸಬಲವಾಗಿದೆ ಎಂಬ ಒಂದೇ ಕಾರಣಕ್ಕೆ ಪೋಷಕರು ಈ ನಿರ್ಧಾರಕ್ಕೆ ಬಂದಿದ್ದರು.

1098 ಸಹಾಯವಾಣಿಗೆ ಬಂದ ಕರೆ ಆಧರಿಸಿ ಸ್ಥಳಕ್ಕೆ ಭೇಟಿ ನೀಡಿದ ಅಧಿಕಾರಿಗಳು, ದಾಖಲೆಗಳನ್ನು ಪರಿಶೀಲಿಸಿದಾಗ ಬಾಲಕಿಗೆ ಕೇವಲ 16 ವರ್ಷ ತುಂಬಿರು ವುದು ದೃಢಪಟ್ಟಿದೆ. ತಕ್ಷಣವೇ ಕಾರ್ಯ ಪ್ರವೃತ್ತರಾದ ತಂಡ ಮದುವೆಯನ್ನು ತಡೆದು ಬಾಲಕಿಯನ್ನು ರಕ್ಷಿಸಿದೆ.

ಬೇವೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮತ್ತೊಂದು ಬಾಲ್ಯ ವಿವಾ ಹದ ಸಿದ್ಧತೆ ನಡೆದಿತ್ತು. ಏಪ್ರಿಲ್ 20 ರಂದು ನಡೆಯಬೇಕಿದ್ದ ಈ ಮದು ವೆಯ ಬಗ್ಗೆ ಮಾಹಿತಿ ಪಡೆದ ಅಧಿಕಾರಿಗಳು ದಾಳಿ ನಡೆಸಿದ್ದಾರೆ. 4ನೇ ತರಗತಿ ಓದುತ್ತಿದ್ದ ಬಾಲಕಿಯನ್ನು ಫೋನ್ ಬಳಕೆಯಿಂದ ಮಕ್ಕಳು ಹಾಳಾ ಗುತ್ತಾರೆ ಎಂಬ ವಿಚಿತ್ರ ಕಾರಣ ನೀಡಿ ಪೋಷಕರು ಮದುವೆ ಮಾಡಲು ಮುಂದಾಗಿದ್ದರು ಎಂದು ತಿಳಿದುಬಂದಿದೆ.

ರಕ್ಷಣಾ ತಂಡದ ಕಾರ್ಯಾಚರಣೆ: ಈ ರಕ್ಷಣಾ ಕಾರ್ಯಾಚರಣೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಬಸವರಾಜ ಗುರುದೇವ್, ವಲಯ ಮೇಲ್ವಿಚಾರಕಿ ಗಿರಿಜಮ್ಮ, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಶಾಲಾ ಮುಖ್ಯೋಪಾಧ್ಯಾಯರಾದ ಯಮನೂರಪ್ಪ ಗವಾರಿ ಮತ್ತು ಮಹಿಳಾ ಪೊಲೀಸ್ ಸಿಬ್ಬಂದಿ ಪಾಲ್ಗೊಂಡಿದ್ದರು.

ವಯಸ್ಸಿನ ಪೂರ್ವ ಮದುವೆ ಅಪಾಯಕಾರಿ ಇಡಿ ಮಗುವಿನ ಬದ ಕನ್ನೇ ಹಾಳು ಮಾಡಿಬಿಡುತ್ತದೆ. ಮಕ್ಕಳಿಗೆ ಉತ್ತಮ ಶಿಕ್ಷಣ ಮತ್ತು ಸಂಸ್ಕಾರಗಳಿಂದ ಅವರ ಬದಕನ್ನು ಹಸನು ಮಾಡಲು ನಾವು ನೀವೆಲ್ಲರು ಶ್ರಮಿಸಬೇಕು. ದೌರ್ಜನ್ಯ ಸಂದರ್ಭದಲ್ಲಿ ಮಹಿಳೆಯರ ಸಹಾಯಕ್ಕೆ ಸಹಾಯವಾಣಿ 181 ಮತ್ತು ಮಕ್ಕಳ ಸಹಾಯಕ್ಕೆ ಸಹಾಯವಾ ಣಿ-1098 ಇದೆ. ಇದಲ್ಲದೇ 24 ಗಂಟೆಯಲ್ಲಿ ಕರ್ತವ್ಯ ನಿರ್ವಹಿಸುವ ಪೊಲೀಸ್ ಸಹಾಯವಾಣಿ 112 ಸಹ ಇದೆ. ಮಕ್ಕಳು ಮತ್ತು ವಯಸ್ಕರ ಸಿಗರೇಟು ಮತ್ತು ತಂಬಾಕು ವ್ಯಸನಕ್ಕೆ ದಾಸರಾಗಿದ್ದರೆ,

ಅವರ ಆಪ್ತ ಸಮಾಲೋ ಚನೆಗಾಗಿ ಸಹಾಯವಾಣಿ 1800112 356 ಇದ್ದು, ಇಂತಹ ಸಹಾಯ ವಾಣಿಗಳ ಸಹಾಯವನ್ನು ಪಡೆದು ಮಕ್ಕಳು ಮತ್ತು ಕುಟಂಬದ ಸುರಕ್ಷತ ಭದ್ರತೆಗಾಗಿ ಸೇವೆಗಳನ್ನು ಪಡೆಯ ಬೇಕೆಂದು ಕೊಪ್ಪಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಸಿಂಧು ಅಂಗಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಷ್ಠಿತ ಶಾಲೆ ಪ್ರವೇಶಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನ

ಕನ್ನಡ ಮಾತೃ ಭೂಮಿ ವಾರ್ತೆ

**ವಿಜಯಪುರ,ಏ.20-** ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಿಗೆ 6ನೇ ತರಗತಿ ಪ್ರವೇಶ ಕಲ್ಪಿಸಲು ಪರಿಶಿಷ್ಟ ಜಾತಿಯ ಪ್ರತಿಭಾವಂತ ವಿದ್ಯಾರ್ಥಿಗಳಿಂದ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಆನ್ಲೈನ್ ಅರ್ಜಿ ಆಹ್ವಾನಿಸಿದೆ. ಅರ್ಹತಾ ಪರೀಕ್ಷೆಗೆ ಇಲಾಖಾ ವೆಬ್ ಸೈಟ್ https://swd.karnataka.gov.in ರಲ್ಲಿ ಆನ್-ಲೈನ್ ಮುಖಾಂತರ ಅರ್ಜಿ ಸಲ್ಲಿಸಬಹುದಾಗಿದೆ. ಆನ್ ಲೈನ್ ಅರ್ಜಿ ಸಲ್ಲಿಸಲು ಮೇ 4 ಕೊನೆಯ ದಿನವಾಗಿದೆ.

ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳು ಪರಿಶಿಷ್ಟ ಜಾತಿಗೆ ಸೇರಿದ್ದು, ತಹಶೀಲ್ದಾರರವರಿಂದ ಪಡೆದ ಆರ್.ಡಿ ಸಂಖ್ಯೆ ಹೊಂದಿರುವ ಚಾಲ್ತಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಲಗತ್ತಿಸಬೇಕು. ವಿದ್ಯಾರ್ಥಿಗಳು ಕುಟುಂಬದ ವಾರ್ಷಿಕ ಆದಾಯ 2.50 ಲಕ್ಷದೊಳಗಿರಬೇಕು. ವಿದ್ಯಾರ್ಥಿಯು 2025-26ನೇ ಸಾಲಿನಲ್ಲಿ 5ನೇ ತರಗತಿಯಲ್ಲಿ ತೇರ್ಗಡೆಯಾಗಿ ಶೇ.60ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರಾಮುಖ್ಯತೆ ನೀಡಲಾಗುವುದು. ಆಯ್ಕೆಯಾಗುವ ವಿದ್ಯಾರ್ಥಿಗಳಲ್ಲಿ ಬಾಲಕಿಯರಿಗೆ ಶೇ.50 ರಷ್ಟು ಮೀಸಲಾತಿ ನೀಡಲಾಗುವುದು. ಬಡತನ ರೇಖೆಗಿಂತ ಕೆಳಗಿರುವ ಹಾಗೂ ಈ ಯೋಜನೆಯ ಸೌಲಭ್ಯವನ್ನು ಪಡೆಯಲು ವಿಫಲರಾಗಿರುವ ಅತಿ ಹಿಂದುಳಿದ ವರ್ಗದ ವರಿಗೆ ಮೊದಲನೇ ಆದ್ಯತೆ ನೀಡಲಾ ಗುವುದು.

ಪೌರ ಕಾರ್ಮಿಕರ,ಸಫಾಯಿ ಕರ್ಮ ಚಾರಿ ಮಕ್ಕಳು, ಸ್ಮಶಾನಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ' ಮಕ್ಕಳು, ವಿಕಲಚೇತನರು ಕೋವಿಡ್-19,ಪ್ರಕೃತಿ ವಿಕೋಪದಿಂದ ತಂದೆ-ತಾಯಿಯನ್ನು ಕಳೆದುಕೊಂಡ ಮಕ್ಕಳು, ಸಿಂಗಲ್ ಫ್ಯಾಮಿಲಿ ಮಕ್ಕಳು, ಯೋಜನಾ ನಿರಾಶ್ರಿತರ ಮಕ್ಕಳು, ಮಾಜಿ ಸೈನಿಕರ ಮಕ್ಕಳು, ಕೊಳಗೇರಿಗಳಲ್ಲಿ ವಾಸಿಸುತ್ತಿರು ವವರ ಮಕ್ಕಳು, ಕೃಷಿ ಕಾರ್ಮಿಕರ ಮಕ್ಕಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಮೇ.4 ರೊಳಗಾಗಿ ಇಲಾಖಾ ವೆಬ್ ಸೈಟ್ https://swd.karnataka.gov.in ನಲ್ಲಿ ನೋಂದಾಯಿಸಿಕೊಂಡು ಅಗತ್ಯ ದಾಖಲೆಗಳನ್ನು ಆಯಾ ತಾಲೂಕಿನ ಸಹಾಯಕ ನಿರ್ದೇಶಕರ ಕಚೇರಿಗೆ ಅಥವಾ ಈ ಕಚೇರಿಗೆ ಸಲ್ಲಿಸಬಹುದಾಗಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಕಚೇರಿ ಸಂಪರ್ಕಿಸಬಹುದಾಗಿದೆ ಎಂದು ಉಪನಿರ್ದೇಶಕರ ಪ್ರಕಟಣೆ ತಿಳಿಸಿದೆ.

# ರಾಷ್ಟ್ರ ನಿರ್ಮಾಣದಲ್ಲಿ ಉತ್ತರ ಪೂರ್ವ ರಾಜ್ಯಗಳ ಮಹತ್ವದ ಕೊಡುಗೆ: ಯಾಡಾ ಮಾರ್ಟಿನ್



ಕನ್ನಡ ಮಾತೃ ಭೂಮಿ ವಾರ್ತೆ

**ಕಲಬುರ್ಗಿ, ಏ.20 -**ಉತ್ತರ ಪೂರ್ವ ರಾಜ್ಯಗಳ ವ್ಯಕ್ತಿಗಳು ವಿವಿಧ ಕ್ಷೇತ್ರಗಳಲ್ಲಿ ಅವಕಾಶಗಳನ್ನು ಅನ್ವೇಷಿಸುತ್ತಿದ್ದು, ರಾಷ್ಟ್ರ ನಿರ್ಮಾಣದಲ್ಲಿ ಮಹತ್ವದ ಕೊಡುಗೆ ನೀಡುತ್ತಿದ್ದಾರೆ ಎಡಿಜಿಪಿ (ಆಡಳಿತ) ಯಾಡಾ ಮಾರ್ಟಿನ್ ಮಾರ್ಬನ್ಯಾಂಗ್ ಅವರು ಹೇಳಿದರು.

ಜಿಲ್ಲೆಯ ಆಳಂದ್ ತಾಲ್ಲೂಕಿನ ಕಡಗಂಚಿ ಬಳಿ ಇರುವ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಉತ್ತರ ಪೂರ್ವ ರಾಜ್ಯಗಳ ಉತ್ಸವ 2026 ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಉತ್ತರ ಪೂರ್ವ ಭಾಗ ರಾಜ್ಯಗಳ ವಿದ್ಯಾರ್ಥಿಗಳ ಪ್ರತಿಭೆ, ಕೌಶಲ್ಯಗಳ ಹೆಚ್ಚುತ್ತಿರುವ ಮಹತ್ವವನ್ನು ವಿವರಿಸಿದರು.

ಪೂರ್ವ ರಾಜ್ಯಗಳ ಜನರು ವಿವಿಧ ಕ್ಷೇತ್ರಗಳಲ್ಲಿ ಅವಕಾಶಗಳನ್ನು ಅನ್ವೇಷಿಸುತ್ತಿದ್ದು, ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಮಹತ್ವದ ಸಾಧನೆಗಳನ್ನು ಮಾಡುತ್ತಿದ್ದಾರೆ. ವಿದ್ಯಾರ್ಥಿಗಳು ತಮ್ಮ ಸಾಂಸ್ಕೃತಿಕ ಗುರುತನ್ನು ಉಳಿಸಿಕೊಂಡು, ತಮ್ಮ ತಮ್ಮ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಪ್ರಯತ್ನಿಸಬೇಕು ಎಂದು ಅವರು ಮನವಿ ಮಾಡಿದರು.

ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ಮಾತನಾಡಿ, ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ವೈವಿಧ್ಯತೆಯಲ್ಲಿ ಏಕತೆ ಸಾರಿದೆ. ಜಮ್ಮು ಕಾಶ್ಮೀರದಿಂದ ಹಿಡಿದು ಕನ್ಯಾಕುಮಾರಿ ವರೆಗೆ ಎಲ್ಲ ರಾಜ್ಯಗಳ ವಿದ್ಯಾರ್ಥಿಗಳು ಇಲ್ಲಿ ಅಭ್ಯಾಸ ಮಾಡುತ್ತಿದ್ದಾರೆ ಇದು ಮಿನಿ ಭಾರತ. ವಿಶ್ವವಿದ್ಯಾಲಯವು ಭಾರತದ ಬಹುಮುಖ ಸಮಾಜದ ಪ್ರತಿರೂಪವಾಗಿದ್ದು, ವಿವಿಧ ಪ್ರದೇಶಗಳಿಂದ ಬಂದ ವಿದ್ಯಾರ್ಥಿಗಳು ಇಲ್ಲಿ ಒಟ್ಟಾಗಿ ಕಲಿಯುತ್ತಾ, ಬೆಳೆದು ಬರುತ್ತಿದ್ದಾರೆ. ಇಂತಹ ಅರ್ಥಪೂರ್ಣ ಹಾಗೂ ಸಮೃದ್ಧ ಕಾರ್ಯಕ್ರಮವನ್ನು ಆಯೋಜಿಸಿದ ಉತ್ತರ ಪೂರ್ವ ವಿದ್ಯಾರ್ಥಿ ಸಮುದಾಯದ ಪ್ರಯತ್ನವನ್ನು ಮೆಚ್ಚಿಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಪ್ರಭಾರ ಕುಲಸಚಿವ ಪ್ರೊ. ಚನ್ನವೀರ ಆರ್. ಎಂ., ವಿದ್ಯಾರ್ಥಿ ಕಲ್ಯಾಣ ವಿಭಾಗದ ಡೀನ್ ಪ್ರೊ. ಬಸವರಾಜ್ ಕುಬಕಡ್ಡಿ ಅವರು ಭಾಗವಹಿಸಿ, ಈ ಮುಂದಾಳತ್ವವನ್ನು ಶ್ಲಾಘಿಸಿದರು ಮತ್ತು ಭವಿಷ್ಯದ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ತಮ್ಮ ಬೆಂಬಲವನ್ನು ವ್ಯಕ್ತಪಡಿಸಿದರು. ಕಾರ್ಯಕ್ರಮ ಸಂಯೋಜಕ ಡಾ. ಜೋಮಿಯರ್ ಬಾಗ್ರಾ ಅವರು ಮಾತನಾಡಿ ಇದು ಕೇವಲ ಆರಂಭವಾಗಿದ್ದು, ಮುಂದಿನ ವರ್ಷಗಳಲ್ಲಿ ಇನ್ನಷ್ಟು ವೈಭವಯುತ ಕಾರ್ಯಕ್ರಮಗಳು ನಡೆಯಲಿವೆ ಎಂದು ತಿಳಿಸಿದರು.

ಉತ್ಸವದ ಪ್ರಮುಖ ಆಕರ್ಷಣೆಯಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಉತ್ಸವವು ಭಾರತದ ಉತ್ತರ ಪೂರ್ವ ರಾಜ್ಯಗಳ ಸಮೃದ್ಧ ಹಾಗೂ ಸಾಂಸ್ಕೃತಿಕ ಪರಂಪರೆಗಳ, ಅಲ್ಲಿನ ಸಂಪ್ರದಾಯಗಳು ಮತ್ತು ಕಲಾತ್ಮಕ ಅಭಿವ್ಯಕ್ತಿಗಳನ್ನು ಅನಾವರಣಗೊಳಿಸಿತು. ಕಾರ್ಯಕ್ರಮದಲ್ಲಿ ಉತ್ತರ ಪೂರ್ವ ರಾಜ್ಯಗಳ ವಿದ್ಯಾರ್ಥಿ ಸಮುದಾಯ ಹಾಗೂ ಅಲ್ಲಿನ ಅಧ್ಯಾಪಕರು ಭಾಗವಹಿಸಿ, ಸಾಂಸ್ಕೃತಿಕ ವಿನಿಮಯ ಮತ್ತು ವೈವಿಧ್ಯದಲ್ಲಿ ಏಕತೆಯನ್ನು ಸಾರಿದರು.

ಪ್ರತಿಯೊಂದು ಕಲಾ ಪ್ರದರ್ಶನವೂ ಉತ್ತರ ಪೂರ್ವ ಭಾಗದ ರಾಜ್ಯಗಳ ವೈಶಿಷ್ಟ್ಯಪೂರ್ಣ, ಅಲ್ಲಿನ ಸಂಸ್ಕೃತಿಯ ಪ್ರತಿಬಿಂಬವಾಗಿತ್ತು ಮತ್ತು ಅದರ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಮತ್ತಷ್ಟು ಪ್ರತಿಪಾದಿಸಿತು. ಉತ್ಸವವು ಮನರಂಜನೆ ನೀಡುವುದಷ್ಟೇ ಅಲ್ಲದೆ, ಉತ್ತರ ಪೂರ್ವ ಭಾಗದ ಸಾಂಸ್ಕೃತಿಕ ವೈವಿಧ್ಯತೆ, ಏಕತೆ ಪರಿಚಯಿಸಿ, ವಿದ್ಯಾರ್ಥಿಗಳ ನಡುವೆ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸಿತು. ಉತ್ತರ ಪೂರ್ವ ಉತ್ಸವ 2026ವು ಸಾಂಸ್ಕೃತಿಕ ಸಾಮರಸ್ಯವನ್ನು ಉತ್ತೇಜಿಸುವುದು ಮತ್ತು ಭಾರತದ ವೈವಿಧ್ಯದಲ್ಲಿ ಏಕತೆಯನ್ನು ಆಚರಿಸುವ ಮಹತ್ವದ ಹೆಜ್ಜೆಯಾಗಿ ಕಾರ್ಯಕ್ರಮ ಸಮಾರೋಪವಾಯಿತು.

# ಜಾನುವಾರುಗಳಿಗೆ ಲಸಿಕೆ ಹಾಕುವ ಕಾರ್ಯಕ್ರಮ ಯಶಸ್ವಿಗೊಳಿಸಿ-ಎಡಿಸಿ

ಕನ್ನಡ ಮಾತೃ ಭೂಮಿ ವಾರ್ತೆ



**ರಾಯಚೂರು, ಏ.20-**ಪಶುಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಯಿಂದ ಜಿಲ್ಲೆಯಲ್ಲಿ ಏಪ್ರಿಲ್ 23 ರಿಂದ ಮೇ.22ರವರೆಗೆ ಎಲ್ಲ ದನ ಹಾಗೂ ಎಮ್ಮೆಗಳಿಗೆ ಕಾಲುಬಾಯಿ ಜ್ವರ ಲಸಿಕೆ ಹಾಕುವ ಕಾರ್ಯ ಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ರೈತರು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಹೇಳಿದರು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗ ಣದಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರಿಥ ಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ 9ನೇ ಜಿಲ್ಲಾ ಮೇಲುಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ ಮೇಲುಸ್ತುವಾರಿ ಸಮಿತಿಯ ಸೂಚನೆ ಯಂತೆ ಏಪ್ರಿಲ್ 23 ರಿಂದ ಮೇ 22ರವರೆಗೆ 9ನೇ ಸುತ್ತಿನ ಕಾಲುಬಾ ಯಿ ಜ್ವರ ಲಸಿಕೆ ಕಾರ್ಯಕ್ರಮವನ್ನು ಜಿಲ್ಲೆಯ ಎಲ್ಲಾ ದನ ಹಾಗೂ ಎಮ್ಮೆಗಳಿಗೆ ಹಾಕುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಕಾರ್ಯಕ್ರಮದಡಿ ರೈತರ ಮನೆ ಬಾಗಿಲಲ್ಲಿ ದನ ಮತ್ತು ಎಮ್ಮೆಗಳಿಗೆ ಕಾಲುಬಾಯಿ ಬೇನೆ ಲಸಿಕೆ ಹಾಕಲಾಗುವುದು. ಈ ಕಾರ್ಯಕ್ಕಾಗಿ ಜಿಲ್ಲೆಯಲ್ಲಿ 29 ತಂಡಗಳನ್ನು ರಚಿಸಿದ್ದು, ಪ್ರತಿ ತಂಡದಲ್ಲಿ 1 ಮೇಲ್ವಿಚಾರಕರು ಹಾಗೂ 2 ಲಸಿಕದಾರರು ಇರುತ್ತಾರೆ. ಜಿಲ್ಲೆಯಲ್ಲಿರುವ 315280 ದನಗಳು ಹಾಗೂ 231927 ಎಮ್ಮೆಗಳನ್ನು ಲಸಿಕಾಕರಣಕ್ಕೆ ಒಳಪಡಿಸಲಾಗು ವುದು. ಜಿಲ್ಲೆಯಲ್ಲಿ ಪ್ರತಿ 120 ಜಾನುವಾರಗಳಿಗೆ ಒಂದು ಬ್ಲಾಕ್ ಮಾಡಲಾಗಿದೆ ಎಂದರು.

ಲಸಿಕಾ ಅಭಿಯಾನದ ನಂತರ ಅಭಿಯಾನದಲ್ಲಿ ಬಿಟ್ಟು ಹೋಗಿರುವ ಜಾನುವಾರುಗಳಿಗೆ ಲಸಿಕೆ ಹಾಕಲಾಗು ವುದು ಎಂದು ಅಪರ ಜಿಲ್ಲಾಧಿಕಾರಿ ಅವರು ತಿಳಿಸಿದರು.

ಜಿಲ್ಲೆಯ ದನ, ಎಮ್ಮೆಗಳು ಕಾಲುಬಾಯಿ ಬೇನೆ ಮುಕ್ತವಾದಲ್ಲಿ ಜಾನುವಾರುಗಳ ಉತ್ಪನ್ನಗಳನ್ನು ಹೆಚ್ಚಿಸಿ, ರೈತರ ಆರ್ಥಿಕ ಪರಿಸ್ಥಿತಿ ಉತ್ತಮಗೊಳ್ಳಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಅವರು ಹೇಳಿದರು.

ಲಸಿಕಾ ಅಭಿಯಾನ ಕಾರ್ಯಕ್ರಮದಲ್ಲಿ ರೈತರು ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಿ ಶೇ.100 ರಷ್ಟು ಗುರಿ ಸಾಧಿಸಲು ಸಹಕರಿಸಲು ಗ್ರಾಮೀಣ ಭಾಗದಲ್ಲಿ ಹೆಚ್ಚು ಜಾಗೃತಿ ಮೂಡಿಸುವಂತೆ ಅಪರ ಜಿಲ್ಲಾಧಿಕಾರಿ ಅವರು ತಿಳಿಸಿ ದರು.

ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕ ಪೋಮ್‌ಸಿಂಗ್ ಅವರು ಸ್ವಾಗತಿಸಿ, ಸಭೆ ನಿರ್ವಹಿಸಿ ದರು.

ಸಭೆಯಲ್ಲಿ ಜಿಲ್ಲೆಯ ವಿವಿಧ ತಾಲೂಕಿನ ಪಶುವೈದ್ಯಾಧಿಕಾರಿಗಳು, ಕೆ.ಎಮ್.ಎಫ್ ವಿಸ್ತರಣಾಧಿಕಾರಿಗಳು, ಕೆ.ಎಮ್.ಎಫ್ ಪಶು ಅಧಿಕಾರಿಗಳು, ಮುಖ್ಯ ಪಶು ಅಧಿಕಾರಿಗಳು ಸಭೆಯಲ್ಲಿ ಇದ್ದರು.

# ಬಸವಣ್ಣನವರ ತತ್ವಗಳು ಸರ್ವಕಾಲಕ್ಕೂ ಸತ್ಯ: ಎಸ್‌ಪಿ ಪ್ರದೀಪ ಗುಂಟಿ

ಕನ್ನಡ ಮಾತೃ ಭೂಮಿ ವಾರ್ತೆ



**ಬೀದರ್, ಏ.20-** ಬಸವಣ್ಣನವರ ತತ್ವಗಳು ಸರ್ವಕಾಲಕ್ಕೂ ಸತ್ಯವಾಗಿದ್ದು, ಅವರ ಸಂಸದಿಯ ಪದ್ದತಿ ಇಂದು ಇಡೀ ಜಗತ್ತೆ ಆರಾಧಿಸುತ್ತಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರು ತಿಳಿಸಿದರು.

ಶನಿವಾರ ನಗರದ ಗುಂಪಾ ರಸ್ತೆಯ ಸಿದ್ದಾರೂಢ ಮಠದ ಎದುರು ಬಸವ ಜಯಂತಿ ಉತ್ಸವ ಸಮಿತಿ ಹಮ್ಮಿಕೊಂಡ ಬೃಹತ್ ಕಾರು ರ್‍ಯಾಲಿಗೆ ಚಾಲನೆ ನೀಡಿ ಮಾತನಾಡಿರುವ ಅವರು, ಧರ್ಮ ರಹಿತ, ಜಾತಿ ರಹಿತ, ಸಮಾಜ ಹಿತ, ಶೋಷಿತ ಸಮುದಾಯವನ್ನು ಮೇಲೆತ್ತಿ ಅಂತರ್ ಜಾತಿ ವಿವಾಹಕ್ಕೆ ಉತ್ತೇಜನ ನೀಡುವ ಮೂಲಕ ಮೇಲು, ಕೀಳು ಎಂಬ ಭೇದ ಸಂಪೂರ್ಣ ನಿರ್ನಾಮ ಮಾಡಿದ ಮಹಾನ ಕ್ರಾಂತಿಯೋಗಿಯಾಗಿರುವರು ಎಂದರು.

ಉತ್ಸವ ಸಮಿತಿಯ ಅಧ್ಯಕ್ಷರಾದ ಡಾ. ರಜನೀಶ್ ವಾಲಿ ಅವರು ಮಾತನಾಡಿ, ಬೃಹತ್ತಾದ ಈ ಕಾರು ರ್‍ಯಾಲಿ ಹಮ್ಮಿಕೊಂಡು ಬಸವಣ್ಣನವರು ಕೇವಲ ಲಿಂಗಾಯತರ ಸ್ವತ್ತಲ್ಲ ಎಲ್ಲ ಸಮುದಾಯದ ಆಸ್ತಿ ಎಂಬ ವಿಶಾಲ ಸಂದೇಶ ರವಾನಿಸುವ ಉದ್ದೇಶ ಹೊಂದಿದ್ದು, ಮೂರು ದಿವಸಗಳ ಕಾಲ ನಡೆಯಲಿರುವ ಜಯಂತಿ ಉತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಾಂಸ್ಕೃತಿಕ ನಾಯಕನಿಗೆ ಗೌರವ ಸಲ್ಲಲಿಸಬೇಕಾಗಿದೆ ಎಂದರು.

ಕಾರು ರ್‍ಯಾಲಿ ಸಿದ್ದಾರೂಢ ಮಠದ ಮುಂಭಾಗದಿಂದ ಮೈಲೂರ ಕ್ರಾಸ್, ಬೊಮ್ಮಗೊಂಡೇಶ್ವರ್ ವೃತ್ತ,

ಬಸವೇಶ್ವರ ವೃತ್ತ, ಮಹಾವೀರ ಚೌಕ್, ಭಗತಸಿಂಗ್ ವೃತ್ತ, ಅಂಬೇಡ್ಕರ್ ವೃತ್ತ, ಹರಳಯ್ಯ ಚೌಕ್, ಮೋಹನ್ ಮಾರ್ಕೆಟ್ ಮೂಲಕ ರೋಟ್ರಿ ಸರ್ಕಲ್, ಮಡಿವಾಳ ಚೌಕ್, ಕೇಂದ್ರ ಬಸ್ ನಿಲ್ದಾಣ ಮುಂಭಾಗದಿಂದ ಪಾಪನಾಶ ದೇವಸ್ಥಾನ ವರೆಗೆ ಸಾಗಿತು.

ಈ ಸಂದರ್ಭದಲ್ಲಿ ಉತ್ಸವ ಸಮಿತಿಯ ಪ್ರಧಾನ ಕಾರ್ಯದರ್ಶಿ ಶಶಿಧರ ಹೊಸಳ್ಳಿ, ಖಜಾಂಚಿ ಸಿದ್ರಾಮಯ್ಯ ಸ್ವಾಮಿ, ಗೌರವ ಅಧ್ಯಕ್ಷ ಜಯರಾಕ್ ಖಂಡ್ರೆ, ಗೌರವ ಸಲಹೆಗಾರರಾದ ಶಿವಶರಣಪ್ಪ ವಾಲಿ, ಬಾಬು ವಾಲಿ, ವೈಜಿನಾಥ ಕಮಠಾಣೆ, ದೀಪಕ ವಾಲಿ, ಸೋಮಶೇಖರ ಪಾಟೀಲ್ ಗಾದಗಿ, ಬಸವರಾಜ್ ಪಾಟೀಲ್, ಬಾಬುರಾವ ಮಲ್ಕಾಪುರೆ, ಶಕುಂತಲಾ ಬೆಲ್ದಾಳೆ ಹಾರೂರಗೇರಿ, ಅಶೋಕಕುಮಾರ್ ಕರಂಜಿ,

ವೀರುಪಾಕ್ಷ ಗಾದಗಿ, ಸಂತೋಷ ಪಾಟೀಲ, ಆಧೀಶ ವಾಲಿ, ವಿಜಯಕುಮಾರ್ ಪಾಟೀಲ್ ಸೇರಿದಂತೆ 150ಕ್ಕೂ ಅಧಿಕ ಬಸವಾನುಯಾಯಿಗಳು ಕಾರು ರ್‍ಯಾಲಿಯಲ್ಲಿ ಪಾಲ್ಗೊಂಡರು.

# ಏ.23 ರಂದು ಶ್ರೀ ಭಗೀರಥ ಜಯಂತಿ

ಕನ್ನಡ ಮಾತೃ ಭೂಮಿ ವಾರ್ತೆ

**ವಿಜಯಪುರ,ಏ.20-**ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಶ್ರೀ ಭಗೀರಥ ಜಯಂತಿ ಆಚರಣೆಯನ್ನು ಏ.23 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌ ಲಭ್ಯ ಅಭಿವೃದ್ಧಿ ಸಚಿವರಾದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಅವರು ಉದ್ಘಾಟಿಸುವರು. ನಗರ ಶಾಸಕ ರಾದ ಬಸನಗೌಡ ಪಾಟೀಲ ಯತ್ನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ, ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ರವಿಕುಮಾರ ಎನ್, ನವದೆಹಲಿಯಲ್ಲಿನ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ 2 ಹಾಗೂ ಶಾಸಕರಾದ ಪ್ರಕಾಶ ಬಿ.ಹುಕ್ಕೇರಿ, ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಮಿತದ ಅಧ್ಯಕ್ಷರೂ ಆದ ಶಾಸಕ ಅಪ್ಪಾಜಿ ಸಿ.ಎಸ್. ನಾಡಗೌಡ, ಸಂಸದರಾದ ರಮೇಶ ಜಗಜಿಣಗಿ ಹಾಗೂ ಸುಧಾ ಮೂರ್ತಿ, ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಕಾಂತಾ ನಾಯ್ಕ, ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಬಿ.ಎಸ್.ಕವಲಗಿ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ವಿಠ್ಠಲ ಕಟಕಧೋಂಡ, ರಾಜುಗೌಡ ಪಾಟೀಲ, ಅಶೋಕ ಮನಗೂಳಿ, ಹಣಮಂತ ನಿರಾಣಿ, ಸುನೀಲಗೌಡ ಪಾಟೀಲ, ಪಿ.ಎಚ್.ಪೂಜಾರ, ಕೇಶವ ಪ್ರಸಾದ ಎಸ್, ಮಹಾನಗರ ಪಾಲಿಕೆಯ ಮಹಾಪೌರರಾದ ಮಡಿವಾಳಪ್ಪ ಕರಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಗಂಗಾಧರ ಎಸ್ ಸಂಬಣ್ಣಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಇಲಿಯಾಸ ಬೋರಾಮಣಿ ಅವರು ಭಾಗವಹಿಸಲಿದ್ದಾರೆ.

ಸಂಗಮೇಶ ಮಿರಗಿ ವಿಶೇಷ ಉಪನ್ಯಾಸ ನೀಡಲಿದ್ದು, ಕುಮಾರಿ ಮಾಳವಿಕಾ ಜೋಶಿ ಸುಗಮ ಸಂಗೀತ ನಡೆಸಿಕೊಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಕಟಣೆ ತಿಳಿಸಿದೆ.

# ಆಧಿ- ವ್ಯಾಧಿಯಿಂದ ದೂರ ಉಳಿಯಲು ಶಿವಯೋಗ ಸರಳ ಮಾರ್ಗ: ಶರಣಪ್ಪ ಚಿಮಕೊಡೆ

ಕನ್ನಡ ಮಾತೃ ಭೂಮಿ ವಾರ್ತೆ




**ಬೀದರ್, ಏ.20-** ಇಷ್ಟಲಿಂಗ ವೈಜ್ಞಾನಿಕ ಪರಿಕಲ್ಪನೆ. ಮಾನಸಿಕ ಅಶಾಂತಿ, ಅವ್ಯವಸ್ಥೆಯಿಂದ ಹೊರಬಂದು ನೆಮ್ಮದಿಯ ಬದುಕು ಸಾಗಿಸಲು ಶಿವಯೋಗ ಅತ್ಯಂತ ಪರಿಣಾಮಕಾರಿಯಾಗಿದೆ ಎಂದು ಅನುಭಾವಿ ಶರಣೆ ಸುವರ್ಣಾ ಶರಣಪ್ಪ ಚಿಮಕೊಡೆ ಅವರು ಹೇಳಿದರು.

ಬಸವ ಜಯಂತಿ ಉತ್ಸವ ಸಮಿತಿ ಆಯೋಜಿಸಿದ ಡಾ ಚೆನ್ನಬಸವ ಪಟ್ಟದ್ದೇವರ ರಂಗ ಮಂದಿರದಲ್ಲಿ ಸಾಮೂಹಿಕ ಇಷ್ಟಲಿಂಗ ಪೂಜೆಯಲ್ಲಿ ಅನುಭಾವ ನಿವೇದಿಸಿದ ಅಕ್ಕ ಸುವರ್ಣಾ ಅಂದಿನ ಕಾಲದಲ್ಲಿ ದೇಹದಲ್ಲೆ ತಾರತಮ್ಯ ಮಾಡಿ ಬಲ ಶ್ರೇಷ್ಠ ಎಡ ಕನಿಷ್ಠ ಎನ್ನುವ ಮತಾಂಧರಿಗೆ ವೈಜ್ಞಾನಿಕ ಹಿನ್ನಲೆಯಲ್ಲಿ ಎಡಗೈಯಲ್ಲಿ ಇಷ್ಟಲಿಂಗ ಕೊಟ್ಟು ಜಾತಿ ಮತ ಪಂಥ ಲಿಂಗ ಭೇದ ವರ್ಗ ಭೇಧ ವರ್ಣ ಭೇದ ಮಾಡದೇ ಮಾನವರಾದವರು ಆಧ್ಯಾತ್ಮ ಸಾಧನೆಗೆ ಲಿಂಗ ಪೂರಕ ಎಂದರು.

ಇದು ದೃಷ್ಟಿ ಯೋಗ. ಎಡಗೈಯಲ್ಲಿ ಇಷ್ಟಲಿಂಗ ಇಟ್ಟು ಕೊಂಡು ಹನ್ನೆರಡಿಂಚು ದೂರದಲ್ಲಿ ಏಕ ದೃಷ್ಟಿಯಿಂದ ವೀಕ್ಷಣೆ ಮಾಡಿದರೆ ಕಣ್ಣಿನಿಂದ ಪೀನಿಯಲ್ ಗ್ರಂಥಿಗೆ ಸಂಪರ್ಕವಾಗಿ ಮೆಲೆಟಾನ ಗ್ರಂಥಿ(ಅಮೃತ ಗ್ರಂಥಿ) ಬಿಡುಗಡೆಯಾಗಿ ಇಡೀ ದೇಹದಲ್ಲಿ ಚೈತನ್ಯ ಸಂಚಲನವಾಗುತ್ತದೆ. ಇದರಿಂದ ನಮ್ಮ ಆರೋಗ್ಯ ಜೊತೆಗೆ ಅಷ್ಟಸಂಕಲ್ಪ ಸಿದ್ಧಿಯಾಗುತ್ತದೆ. ಅಂದು ಶರಣರು ಓದಿದವರಲ್ಲ ಆದರೂ ವಿಶ್ವವಿದ್ಯಾಲಗಳ ಸಂಪನ್ಮೂಲ ವ್ಯಕ್ತಿಗಳ ವಿಚಾರಗಳಿಗೆ ನಿಲುಕಲಾರದ ವಿಷಯಗಳನ್ನು ವಚನಗಳಲ್ಲಿ ಹಿಡಿದಿಟ್ಟಿರುವುದು ನ ಭೂತೋ ನ ಭವಿಷ್ಯ ಎಂಬ ರೀತಿಯಲ್ಲಿ ಇಡೀ ಜಗತ್ತಿನ ಮಾನವ ಜನಾಂಗಕ್ಕೆ ಸಾಧನೆ ಮಾಡಲು ಇದು ಸಾಧ್ಯವಾಗಿದೆ.ವ್ಯಕ್ತಿಯ ಬದುಕಿಗೆ ಆಧಿ-ವ್ಯಾಧಿಯಿಂದ ದೂರ ಉಳಿಯಲು, ಆರೋಗ್ಯವಂತರಾಗಲು ಶಿವಯೋಗ ಸರಳ ಮಾರ್ಗ. ಮನಸ್ಸಿದ್ದವರು, ಸಮಯ ಇದ್ದವರು, ಪರೀಕ್ಷೆ ಮಾಡಿ, ಆಚರಣೆ ಅರಿತು ಮುನ್ನಡೆದರೆ ಬದುಕುಹಸನನಾಗುತ್ತದೆ ಎಂದು ಅವರು ಹೇಳಿದರು.

ಇಂದು ಯುವಕರು ಅನೇಕ ಗೊಡ್ಡ ಸಂಪ್ರದಾಯಗಳಿಗೆ ಮಾರು ಹೋಗಿ ಜೀವನ ಹಾಳು ಮಾಡಿ ಕೊಂಡಿರುವುದು ಗಮನಿಸಿದ್ದೇವೆ.

ಏನನ್ನಾದರೂ ಸಾಧಿಸಲು ಇಷ್ಟಲಿಂಗದ ಶಿವಯೋಗಕ್ಕೆ ಮೊರೆ ಹೋಗಲು ಅತ್ಯಂತ ಮಾರ್ಮಿಕವಾಗಿ ನುಡಿದರು. ಇಷ್ಟಲಿಂಗ ಪ್ರಾತ್ಯಕ್ಷಿಕೆಯನ್ನು ತೋರಿಸುತ್ತ ಡಾ ಗಂಗಾಂಬಿಕೆ ಅಕ್ಕ ಬಸವ ಸೇವಾ ಪ್ರತಿಷ್ಠಾನ ಮಾರ್ಗದರ್ಶನ ನೀಡುತ್ತ ಪ್ರತಿಯೊಬ್ಬರು ನಿಷ್ಠೆ, ಶ್ರದ್ಧೆ, ಭಕ್ತಿಯಿಂದ ದಿನಾಲೂ ಮೂರು ನಿಮಿಷ ಕನಿಷ್ಠ ಇಪ್ಪತ್ತೊಂದು ನಿಮಿಷ ಗರಿಷ್ಠ ಲಿಂಗ ನಿರೀಕ್ಷಣೆ ಮಾಡಿದರೆ ಅತೀ ಶೀಘ್ರದಲ್ಲೇ ನಮ್ಮ ವ್ಯಾದಿದೂರವಾಗುವುದರಲ್ಲಿ ಸಂದೇಹ ವಿಲ್ಲ.

ಇಲ್ಲಿ ಖರ್ಚಿಲ್ಲ, ಪೂಜಾರಿ/ಪುರೋಹಿತರ ಅವಶ್ಯಕತೆ ಇಲ್ಲ. ನಮ್ಮ ಅರಿವು ನಾವೇ ಜಾಗೃತಿ ಮಾಡಿಕೊಳ್ಳಲು ಹಂತ ಹಂತವಾಗಿ ಶಿವಯೋಗ ಸಾಧನೆ ಮಾಡಲು ಎಲ್ಲರ ಮನ ಮುಟ್ಟುವಂತೆ ಪ್ರಾತ್ಯಕ್ಷಿಕೆ ಮುಖಾಂತರ ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಡಾ. ದೇವಕಿ ಅಶೋಕ ನಾಗೂರೆ ಅವರು ಮಾತನಾಡಿ, ಇದು ಅತ್ಯಂತ ಪರಿಣಾಮಕಾರಿಯಾದ ಲಾಭ ನಮ್ಮ ದೇಹದ ಮೇಲೆ ಆಗುತ್ತದೆ. ಯಾವುದೇ ಬೆಲೆ ಬಾಳುವ ಪೂಜಾ ಪರಿಗಳಿಲ್ಲದೆ ವಿಭೂತಿ, ನೀರಿದ್ದರೆ ಪೂಜೆ ಮಾಡಿಕೊಳ್ಳಲು ವಿಶ್ವಗುರು ಬಸವಣ್ಣ ಹಾಗೂ ಶರಣರು ವಚನಗಳ ಮೂಲಕ ಪ್ರಸ್ತುತ ಪಡಿಸಿದ್ದಾರೆ.

ಅದರ ಲಾಭ ನಾವಾದರು ಪಡೆಯಲು ಸನ್ನದ್ಧರಾಗಬೇಕೆಂದು ಹೇಳಿದರು. ವೇದಿಕೆ ಮೇಲೆ ಉಷಾ ಮಿರ್ಚೆ ರತ್ನಾ ಪಾಟೀಲ್, ಸಂತೋಷಿ ಗಂದಗೆ, ಶೀಲಾವತಿ ಶೀಲವಂತ, ಶಕುಂತಲಾ ಬೆಲ್ದಾಳೆ,ನೀತು ಬೆಲ್ದಾಳೆ, ಕಲ್ಪನಾ ಸಾವಲೆ, ಲಕ್ಷ್ಮಿ ಬಿರಾದಾರ್, ಶಾಂತಾ ಖಂಡ್ರೆ, ನೀಲಮ್ಮ ರೂಗನ್, ಭಾಗ್ಯವತಿ ಮುದ್ದಾ ಉಪಸ್ಥಿತರಿದ್ದರು.

ಬೆಳಿಗ್ಗೆ ಮುನ್ನೂರು ಶರಣ ಶರಣೆಯರು ಇಷ್ಟಲಿಂಗ ಪೂಜೆಯಲ್ಲಿ ಭಾಗವಹಿಸಿದ್ದರು. ಡಾ ವಿದ್ಯಾವತಿ ಬಲ್ಲೂರ್ ಅವರು ಕಾರ್ಯಕ್ರಮ ನಿರೂಪಿಸಿದರು. ಜ್ಞಾನದೇವಿ ಬಬಛಡೆ ಅವರು ಸ್ವಾಗತಿಸಿದರು. ಕರುಣಾ ಶಟಕಾರ್ ಅವರು ವಂದಿಸಿದರು.

# ಆರೋಗ್ಯಪೂರ್ಣ ಜೀವನಕ್ಕೆ ಯೋಗವೇ ಮೂಲಮಂತ್ರ - ಅನಂತ ಬಿರಾದಾರ

ಕನ್ನಡ ಮಾತೃ ಭೂಮಿ ವಾರ್ತೆ



**ಬೀದರ್,ಏ.20-**ದೈಹಿಕ, ಮಾನಸಿಕ, ಆಧ್ಯಾತ್ಮಿಕ ಹಾಗೂ ಭಾವನಾತ್ಮಕ ಸಮತೋಲನವೇ ನಿಜವಾದ ಆರೋಗ್ಯಪೂರ್ಣ ಜೀವನ ಎಂದು ಅಂತರರಾಷ್ಟ್ರೀಯ ಪ್ರಾಕೃತಿಕ ಚಿಕಿತ್ಸಾ ಸಂಸ್ಥೆಯ ಅಧ್ಯಕ್ಷ ಅನಂತ ಬಿರಾದಾರ ಹೇಳಿದರು.

ನಗರದ ಸಪ್ನಾ ಕನ್ವೆನ್ಷನ್ ಹಾಲ್‌ನಲ್ಲಿ ಪತಂಜಲಿ ಯೋಗ ಸಮಿತಿಯ ಜಿಲ್ಲಾ ಘಟಕದಿಂದ ಶನಿವಾರ ಆಯೋಜಿಸಿದ್ದ ಯೋಗ, ಧ್ಯಾನ ಹಾಗೂ ಪ್ರಾಣಾಯಾಮ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರೋಗ ರಹಿತ ಜೀವನ ಮಾತ್ರ ಸಾಕಾಗುವುದಿಲ್ಲ; ದೇಹ ಮತ್ತು ಮನಸ್ಸಿನ ಸಮತೋಲನ ಅತ್ಯಂತ ಮುಖ್ಯ. ರೋಗಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಯೋಗವನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಯೋಗ ಹಾಗೂ ಪ್ರಾಕೃತಿಕ ಚಿಕಿತ್ಸೆ ಆರೋಗ್ಯಕರ ಮತ್ತು ಆನಂದಮಯ ಜೀವನಕ್ಕೆ ನೆರವಾಗುತ್ತವೆ ಎಂದರು.

ಪತಂಜಲಿ ಯೋಗ ಸಮಿತಿಯ ಕರ್ನಾಟಕ ಪ್ರಭಾರಿ ಭವರಲಾಲ್ ಆರ್ಯ ಮಾತನಾಡಿ, ಯೋಗವು ದೈಹಿಕ ಮತ್ತು ಮಾನಸಿಕ ಚೈತನ್ಯವನ್ನು ಹೆಚ್ಚಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಆಸನ, ಪ್ರಾಣಾಯಾಮ ಮತ್ತು ಧ್ಯಾನ ಯೋಗದ ಪ್ರಮುಖ ಅಂಗಗಳಾಗಿವೆ ಎಂದು ತಿಳಿಸಿದರು.

ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಮಾತನಾಡಿ, ಯೋಗವು ಜೀವನ ಪದ್ಧತಿ, ಚಿಕಿತ್ಸೆ ಮತ್ತು ಸಾಧನೆಯ ಮಾರ್ಗವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಯೋಗೇಂದ್ರ ಯದಲಾಪುರೆ ಜಿಲ್ಲೆಯನ್ನು ಆರೋಗ್ಯಪೂರ್ಣ ಜಿಲ್ಲೆಯನ್ನಾಗಿಸುವ ಗುರಿ ಹೊಂದಿರುವುದಾಗಿ ತಿಳಿಸಿದರು. ಕಾರ್ಯಕ್ರಮದ ಬಳಿಕ ಯೋಗ ಜಾಗೃತಿ ಜಾಥಾ ನಡೆಯಿತು.

# ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಯಶಸ್ವಿಗೆ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಿ - ಸಿಇಒ

ಕನ್ನಡ ಮಾತೃ ಭೂಮಿ ವಾರ್ತೆ



**ಬಳ್ಳಾರಿ,ಏ.20-**ಜಿಲ್ಲೆಯ ಆರೋಗ್ಯ ಸುಧಾರಣೆ ಮತ್ತು ರಾಷ್ಟ್ರೀಯ ಆರೋಗ್ಯ ಕಾರ್ಯ ಕ್ರಮಗಳ ಪರಿಣಾಮಕಾರಿ ಅನುಷ್ಠಾನ ಕ್ಕಾಗಿ ವೈದ್ಯಾಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಸೂಚಿಸಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಭಾಂಗಣದಲ್ಲಿ ಶುಕ್ರವಾರ ನಡೆದ ವೈದ್ಯಾಧಿಕಾರಿಗಳ ಜಿಲ್ಲಾ ಮಟ್ಟದ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**ಕ್ಷಯರೋಗ ನಿರ್ಮೂಲನೆಗೆ ಆದ್ಯತೆ:**

ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿ ಕ್ಷಯರೋಗದ ಲಕ್ಷಣಗಳು ಕಂಡುಬಂದ ತಕ್ಷಣವೇ ಕಫ ಪರೀಕ್ಷೆ ಮಾಡಿಸಬೇಕು. ಬೇಗ ಪತ್ತೆ ಹಚ್ಚುವುದು, ಸಂಪೂರ್ಣ ಚಿಕಿತ್ಸೆ ನೀಡುವುದು ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಕ್ಷಯರೋಗ ಮುಕ್ತ ಜಿಲ್ಲೆಯನ್ನಾಗಿಸಲು ಇರುವ ಏಕೈಕ ದಾರಿ ಎಂದು ಅವರು ಅಭಿಪ್ರಾಯಪಟ್ಟರು.

**ತಾಯಿ ಮತ್ತು ಶಿಶು ಮರಣ ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ:**

ಗರ್ಭಿಣಿಯರ ಆರೋಗ್ಯದ ಕುರಿತು ವಿಶೇಷ ಗಮನ ಹರಿಸಲು ಸೂಚಿಸಿದ ಸಿಇಒ ಅವರು, ಗರ್ಭಿಣಿಯರನ್ನು ಮೊದಲ ಮೂರು ತಿಂಗಳಲ್ಲೇ ಕಡ್ಡಾಯವಾಗಿ ನೋಂದಣಿ ಮಾಡಿಸಬೇಕು. ನಿಯಮಿತ ತಪಾಸಣೆ ಮೂಲಕ ರಕ್ತಹೀನತೆ ಪತ್ತೆ ಹಚ್ಚಿ, ಸುರಕ್ಷಿತ ಹೆರಿಗೆಗೆ ಆದ್ಯತೆ ನೀಡಬೇಕು. ಸಮುದಾಯ, ಪ್ರಾಥಮಿಕ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಗರಿಷ್ಠ ಹೆರಿಗೆಗಳನ್ನು ನಡೆಸುವ ಮೂಲಕ ತಾಯಿ-ಶಿಶು ಮರಣ ಪ್ರಮಾಣ ತಗ್ಗಿಸಬೇಕು. ತಾಯಿ ಕಾರ್ಡ್‌ಗಳಲ್ಲಿ ತಪಾಸಣೆಯ ಎಲ್ಲಾ ವಿವರಗಳನ್ನು ಕಡ್ಡಾಯವಾಗಿ ದಾಖಲಿಸಬೇಕು ಎಂದು ತಿಳಿಸಿದರು.

**ಹೆಚ್.ಪಿ.ವಿ ಲಸಿಕೆ ಅಭಿಯಾನ:**

ಜಿಲ್ಲೆಯಲ್ಲಿ ಹೆಚ್.ಪಿ.ವಿ ಲಸಿಕೆ ಪ್ರಗತಿ ಕುಂಠಿತಗೊಂಡಿದ್ದು, 14 ವರ್ಷದ ಹೆಣ್ಣು ಮಕ್ಕಳಿಗೆ ಲಸಿಕೆ ನೀಡಲು ಪೋಷಕರು ಮತ್ತು ಶಿಕ್ಷಕರಿಗೆ ಜಾಗೃತಿ ಮೂಡಿಸಬೇಕು. ಸ್ಥಳೀಯ ಮುಖಂಡರ ಸಹಕಾರದೊಂದಿಗೆ ಸಮುದಾಯ ಸಭೆಗಳನ್ನು ನಡೆಸಿ ಲಸಿಕೆಯ ಮಹತ್ವ ತಿಳಿಸಬೇಕು ಎಂದು ಸೂಚಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಮಾತನಾಡಿ, ಆಶಾ ಕಾರ್ಯಕರ್ತೆಯರು ಮತ್ತು ಆರೋಗ್ಯ ಸುರಕ್ಷಾ ಅಧಿಕಾರಿಗಳು ಗರ್ಭಿಣಿಯರ ಮನೆಗೆ ಭೇಟಿ ನೀಡಿ ನಿರಂತರ ಸಂಪರ್ಕದಲ್ಲಿರಬೇಕು. ಆಸ್ಪತ್ರೆಗಳಲ್ಲಿನ ಟಿವಿಗಳ ಮೂಲಕ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ಪ್ರಸಾರ ಮಾಡಬೇಕು.

ಬೇಸಿಗೆಯ ಹಿನ್ನೆಲೆಯಲ್ಲಿ ಶಾಖಾಘಾತ ಚಿಕಿತ್ಸೆಗೆ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ನಾಯಿ ಮತ್ತು ಹಾವು ಕಡಿತದ ಕುರಿತು ಶಾಲೆ ಹಾಗೂ ಪಂಚಾಯತ್ ಮಟ್ಟದಲ್ಲಿ ನಿರಂತರ ಜಾಗೃತಿ ಮೂಡಿಸಬೇಕು ಎಂದು ವೈದ್ಯಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿ ಡಾ.ಆರ್. ಅಬ್ದುಲ್ಲಾ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕ್ಷಯ ರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕು ಆರೋಗ್ಯ ಅಧಿಕಾರಿಗಳು, ಎಲ್ಲಾ ಆಡಳಿತ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಶಾಸಕ ಆರ್ ಬಸನಗೌಡ ತುರುವಿಹಾಳರವರಿಗೆ ಸಚಿವ ಸ್ಥಾನ ನೀಡಲು ಡಾ.ಸರಸ್ವತಿ ಪಾಟೀಲ್ ಅವರು ಒತ್ತಾಯ

ಕನ್ನಡ ಮಾತೃ ಭೂಮಿ ವಾರ್ತೆ



**ರಾಯಚೂರು,ಏ.20-**2021 ನೇ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಮುಳುಗುವ ಹಡಗುವ ಎನ್ನುವ ಟೀಕೆಗಳ ನಡುವೆ ಮಸ್ಕಿ ಕ್ಷೇತ್ರದ ಮತದಾರರು ಬಸನಗೌಡ ತುರುವಿಹಾಳರವರನ್ನು ಗೆಲ್ಲಿಸಿ ಸ್ಪಷ್ಟ ಉತ್ತರ ನೀಡಿದ್ದಾರೆ.

ಈ ಚುನಾವಣೆಯ ಸಮಯದಲ್ಲಿ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರದ ಮುಖ್ಯಮಂತ್ರಿ, ಸಚಿವರು ಹಾಗೂ ವಿವಿಧ ಮುಖಂಡರು ವ್ಯಾಪಕ ಪ್ರಚಾರ ನಡೆಸಿದರೂ ಸಹ ಮಸ್ಕಿ ಕ್ಷೇತ್ರದ ತದಾರರು ಆರ.ಬಸನಗೌಡ ತುರುವಿಹಾಳರವರನ್ನು ಸುಮಾರು 36,000ಕ್ಕೂ ಅಧಿಕ ಮತಗಳ ಅಂತರದಿಂದ ಆರಿಸಿ ಕಳಿಸಿದ್ದಾರೆ.ರಾಜ್ಯದಲ್ಲಿಯೇ ಅತಿ ಹಿಂದುಳಿದ ಕ್ಷೇತ್ರವಾದ ಮಸ್ಕಿ ಕ್ಷೇತ್ರವನ್ನು ಇವರು ಆಯ್ಕೆಯಾದ ನಂತರ ಸಾಕಷ್ಟು ರೈತರ ಪರ ರಸ್ತೆ ಅಭಿವೃದ್ಧಿ ಇಂದಿರಾ ಕ್ಯಾಂಟೀನ್, ಮಿನಿ ವಿಧಾನ ಸೌಧ, ಎ. ಪಿ. ಎಂ ಸಿ ನೀರಾವರಿ ಯೋಜನೆ, ವಿದ್ಯಾರ್ಥಿಗಳಿಗೆ ಶಾಲೆ ಕಾಲೇಜ್, ಹಾಸ್ಟೆಲ್ ಮಂಜೂರ ಮಾಡಿಸಿದ್ದು, ಬೆಳಿಗ್ಗೆ ಎಂಟು ಗಂಟೆಯಿಂದ ರಾತ್ರಿ 9:00 ಗಂಟೆಯವರೆಗೆ ಕ್ಷೇತ್ರದಲ್ಲಿ ಸಂಚರಿಸಿ ಬಡವರ ಬಗ್ಗೆ ನೊಂದವರ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಅವರ ಬೇಡಿಕೆಗಳು ಈಡೇರಿಕೆಗೆ ಸ್ಪಂದಿಸಿದ್ದರಿಂದ 2023ರ ಸಾರ್ವತ್ರಿಕ ಚುನಾವಣೆಯಲ್ಲೂ ಪುನಃ ಗೆದ್ದು ಮಸ್ಕಿ ಕ್ಷೇತ್ರವನ್ನು ಕಾಂಗ್ರೆಸ್ಸಿನ ಭದ್ರಕೋಟೆಯಾಗಿ ಗುರುತಿಸಿದ್ದಾರೆ ಶಾಸಕರಾಗಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ ನಮ್ಮ ಸಹೋದರರಾದ ಆರ್ ಬಸನಗೌಡ ತುರುವಿಹಾಳ ಶಾಸಕರು ಇವರಿಗೆ ಸಚಿವ ಸ್ಥಾನ ಕೊಟ್ಟು ಹೆಚ್ಚಿನ ಅಭಿವೃದ್ಧಿ ಕೆಲಸ ಕಾರ್ಯಗಳು ಮಾಡಲು ಹೈಕಮಾಂಡ್ ಇವರಿಗೆ ಹೆಚ್ಚಿನ ಶಕ್ತಿ ನೀಡುವಂತೆ ಡಾ. ಸರಸ್ವತಿ ಪಾಟೀಲ್ ಕಾಸರೆಡ್ಡಿ ತಿಡಿಗೋಳ ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ರವರು ಅಭಿಪ್ರಾಯಪಟ್ಟು ಒತ್ತಾಯಿಸಿರುತ್ತಾರೆ.

# ಮಾನಸಿಕ ಗುಲಾಮಗಿರಿಯಿಂದ ಹೊರಬರಲು ನಿಜಗುಣಾನಂದರ ಕರೆ

ಕನ್ನಡ ಮಾತೃ ಭೂಮಿ ವಾರ್ತೆ




**ಕಲಬುರ್ಗಿ, ಏ.20-** ದೈಹಿಕ ಗುಲಾಮಗಿರಿಗಿಂತ ಮಾನಸಿಕ ಗುಲಾಮಗಿರಿ ಬಹಳ ಅಪಾಯಕಾರಿಯಾಗಿದೆ. ಆದ್ದರಿಂದ ಪ್ರತಿಯೊಬ್ಬರೂ ಮಾನಸಿಕ ಗುಲಾಮಗಿರಿಯಿಂದ ಹೊರಬರಬೇಕು ಎಂದು ಬೈಲೂರ ನಿಷ್ಕಲ ಮಂಟಪದ ನಿಜಗುಣಾನಂದ ಮಹಾಸ್ವಾಮಿಗಳು ಕರೆ ನೀಡಿದರು.

ನಗರದ ಹೀರಾಪುರ ಕ್ರಾಸ್‌ನ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಆಯೋಜಿಸಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ ಅರ್ಥಪೂರ್ಣ 135ನೇ ಜಯಂತ್ಯುತ್ಸವ ಸಮಾರೋಪ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಬುದ್ಧ, ಬಸವ, ಅಂಬೇಡ್ಕರ್ ಮುಂತಾದ ಮಹನೀಯರು ಜಯಂತಿಗೆ ಸೀಮಿತವಾಗದೇ ಜನರ ಅರಿವಿನಲ್ಲಿ ನೆಲೆಯೂರಬೇಕು ಎಂದರು.

ಅಂಬೇಡ್ಕರ್ ಅವರು ಹೇಳಿದಂತೆ ಹೋರಾಟ ಮಾಡದಿದ್ದರೂ ಪರವಾಗಿಲ್ಲ, ಆದರೆ ಯಾರೂ ತಮ್ಮನ್ನು ಮಾರಾಟ ಮಾಡಿಕೊಳ್ಳಬಾರದು. ಬುದ್ಧಿ ಮಾರಾಟ ಮಾಡಿಕೊಳ್ಳಬಾರದು ಎಂದು ಸ್ಪಷ್ಟವಾಗಿ ಕರೆ ನೀಡಿದರು. ಕಣ್ಣಿಗೆ ಕಾಣುವ ಮನುಷ್ಯರನ್ನು ಪ್ರೀತಿಸದಿದ್ದರೆ ದೇವರನ್ನು ಪ್ರೀತಿಸಲು ಸಾಧ್ಯವಿಲ್ಲ ಎಂದು ಹೇಳಿದ ಅವರು, ಬುದ್ಧ, ಬಸವ, ಅಂಬೇಡ್ಕರ್ ಮಾನವೀಯ ಮೌಲ್ಯಗಳನ್ನು ಸಾರಿದ ಮಹನೀಯರು ಎಂದರು.

ಅಂಬೇಡ್ಕರ್ ಅವರು ರಾಜ್ಯವಾಳಿದವರಲ್ಲ; ಆದರೆ ಅರಿವಿನ ಪೆನ್ನು ಹಿಡಿದು ಸಮಾಜಕ್ಕೆ ಪ್ರಜ್ಞೆ ತುಂಬಿದ ಮಹಾನ್ ಚಿಂತಕರು. ಅವರು ಕೇವಲ ದಲಿತರ ಉದ್ಧಾರಕರಲ್ಲ, ಕಾನೂನಿನ ಮೂಲಕ ಎಲ್ಲಾ ವರ್ಗದ ಜನರ ಉನ್ನತಿಗಾಗಿ ಶ್ರಮಿಸಿದ ಮಹಾಮಾನವತಾವಾದಿ ಎಂದು ವಿವರಿಸಿದರು. ಅವರು ನೀಡಿದ ಮತದಾನದ ಹಕ್ಕಿನ ಮಹತ್ವವನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯ ಅಧ್ಯಕ್ಷ ಅರುಣ ಕುಮಾರ್ ಎಂ.ವೈ. ಪಾಟೀಲ್, ಮೇಯರ್ ವರ್ಷಾ ರಾಜೀವ್ ಜಾನೆ, ಪಿಐಗಳಾದ ಚಂದ್ರಶೇಖರ್ ತಿಗಡಿ, ಮಹಾದೇವಪ್ಪಾ ದಿಡ್ಡಿಮನಿ, ರಾಜಕುಮಾರ್ ಯಂಕಂಚಿ, ವಚನ ಡೆವಲಪರ್ಸ್‌ನ ಶಿವಕುಮಾರ್ ಸಾಲಿ ಹಾಗೂ ಡಾ. ಸುರೇಶ್ ಶರ್ಮಾ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಯಂತ್ಯುತ್ಸವ ಸಮಿತಿ ಅಧ್ಯಕ್ಷ ಹಣಮಂತ ಇಟಗಿ ಅವರು ವಹಿಸಿದ್ದರು. ಕರ್ನಾಟಕ ರಾಜ್ಯ ಅಲ್ಪಸಂಖ್ಯಾತ ಆಯೋಗದ ಸದಸ್ಯ ಲಕ್ಷ್ಮೀಕಾಂತ ಹುಬಳಿ, ಸಮಿತಿಯ ಗೌರವಾಧ್ಯಕ್ಷರು ಹಾಗೂ ಇತರ ಪದಾಧಿಕಾರಿಗಳು ವೇದಿಕೆ ಮೇಲೆ ಉಪಸ್ಥಿತರಿದ್ದರು.

ಕಾರ್ಯಾಧ್ಯಕ್ಷ ಅಲ್ಲಮಪ್ರಭು ನಿಂಬರ್ಗಾ, ಮುತ್ತಣ್ಣ ನಡಗೇರಿ, ಗೌರವ ಸಲಹೆಗಾರರಾದ ಅರವಿಂದ್ ಕಮಲಾಪುರ, ಕಾರ್ಯದರ್ಶಿ ಪಂಡಿತ ಬಿ. ಮದಗುಣಕಿ, ಶ್ರೀಧರ, ನರೋಣ, ಸಿದ್ದು ಬೆಲಸೂರ್, ಕಾನು ಕೋವಿ, ವಿನೋದ್ ಕಾಂಬಳೆ, ಮಯೂರ ವಾಘಮೋರೆ, ದಿಲೀಪ್ ಕಿರಸಾವಳಗಿ, ಚಂದು ಸಿಂಘೆ, ವಿಧ್ಯಾಸಾಗರ್ ಬಬಲಾದಕರ್, ಸಿದ್ದಾರ್ಥ ಪಾರೆ, ಸಂಜು ಧೂಳೆ, ಮಹೇಶ ನವಲಗಿರಿ, ಸುನೀಲ್ ಕೋವಿ, ದಶರಥ, ತಳಕೇರಿ, ಶಿವಾನಂದ್ ಬುಕ್ಕನ್, ಸತೀಶ ಹಾಗರಗಿ, ಸತೀಶ್ ಕೇಲಕೇರಿ, ಯಲ್ಲಾಲಿಂಗ ಸುಂಟನೂರ್ ಅವರೂ ಸೇರಿದಂತೆ ಹಲವರು ಭಾಗವಹಿಸಿದ್ದರು.

ಇದೇ ವೇಳೆ ದೇಹದಾನ ಮಾಡಿದ ಮಹನೀಯರನ್ನು ಹಾಗೂ ಜೀವಮಾನದ ಸಾಮಾಜಿಕ ಸೇವೆಗಾಗಿ ಡಾ. ಸುರೇಶ ಎಲ್. ಶರ್ಮಾ ಅವರನ್ನು ಸನ್ಮಾನಿಸಲಾಯಿತು.

ನಾಗಾರ್ಜುನ್ ಕೋಟನೂರ್ ಅವರು ಕಾರ್ಯಕ್ರಮ ನಿರೂಪಿಸಿದರು. ಅನಿಲ್ ಟೆಂಗಳಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

# ಕೇಂದ್ರ ರೈಲ್ವೆಯ ಸೋಲಾಪುರ ವಿಭಾಗದ ಇಬ್ಬರು ಸಿಬ್ಬಂದಿಗೆ ಜನರಲ್ ಮ್ಯಾನೇಜರ್ ಸುರಕ್ಷಾ ಪ್ರಶಸ್ತಿ




ಕನ್ನಡ ಮಾತೃ ಭೂಮಿ ವಾರ್ತೆ

**ಸೋಲಾಪುರ, ಏ.20-**ಮಧ್ಯ ರೈಲ್ವೆಯ ಜನರಲ್ ಮ್ಯಾನೇ ಜರ್ ರಾಜೀವ್ ಶ್ರೀವಾಸ್ತವ ಅವರು ಬುಧವಾರ ಮುಂಬೈನ ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಸ್‌ನಲ್ಲಿ ನಡೆದ ಸಮಾರಂಭದಲ್ಲಿ ಸೋಲಾಪುರ ವಿಭಾಗದ ಇಬ್ಬರು ಕೇಂದ್ರ ರೈಲ್ವೆ ಸಿಬ್ಬಂದಿಗೆ ಸುರಕ್ಷತಾ ಪ್ರಶಸ್ತಿ ನೀಡಿ ಸನ್ಮಾನಿಸಿದರು.

ಕಳೆದ ತಿಂಗಳುಗಳಲ್ಲಿ ಸಂಭಾವ್ಯ ಅಹಿತಕರ ಘಟನೆಗಳನ್ನು ತಪ್ಪಿಸಲು ಮತ್ತು ಸುರಕ್ಷಿತ ರೈಲು ಕಾರ್ಯಾಚರಣೆಯನ್ನು ಖಚಿತಪಡಿಸಿಕೊಳ್ಳಲು ಸಹಾಯ ಮಾಡಿದ ಕರ್ತವ್ಯದಲ್ಲಿರುವಾಗ ನೌಕರರು ಪ್ರದರ್ಶಿಸಿದ ಜಾಗರೂಕತೆ, ಮನಸ್ಸಿನ ಉಪಸ್ಥಿತಿ ಮತ್ತು ಕರ್ತವ್ಯ ಸಮರ್ಪಣೆಯನ್ನು ಗುರುತಿಸಿ ಈ ಸುರಕ್ಷತಾ ಪ್ರಶಸ್ತಿಗಳನ್ನು ನೀಡಲಾಯಿತು. ಪ್ರತಿ ಪ್ರಶಸ್ತಿಯು ಪದಕ, ಪ್ರಶಂಸಾ ಪ್ರಮಾಣಪತ್ರ, ಅನುಕರಣೀಯ ಸುರಕ್ಷತಾ ಕಾರ್ಯಕ್ಕಾಗಿ ಉಲ್ಲೇಖ ಮತ್ತು 3500 ರೂ.ಗಳ ನಗದು ಬಹುಮಾನವನ್ನು ಒಳಗೊಂಡಿದೆ. ಸೋಲಾಪುರ ವಿಭಾಗದ ಧರಾಶಿವದ ತಂತ್ರಜ್ಞ ರಮೇಶ್ ತನ್ಮೋರ್ ಮತ್ತು ದುಧನಿಯ ತಂತ್ರಜ್ಞ ಯೋಗೇಂದ್ರ ಕುಮಾರ್ ಪ್ರಶಸ್ತಿ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ.

ಜನರಲ್ ಮ್ಯಾನೇಜರ್ ಪ್ರಶಸ್ತಿ ಪುರಸ್ಕೃತರನ್ನು ಅವರ ಕರ್ತವ್ಯ ಮತ್ತು ಜಾಗರೂಕತೆ ಕಾರ್ಯಾಚರಣೆಗಾಗಿ ಅಭಿನಂದಿಸಿದರು ಮತ್ತು ಅವರ ಕಾರ್ಯಗಳು ಇತರ ರೈಲ್ವೆ ನೌಕರರು ಪ್ರಯಾಣಿಕರ ಸುರಕ್ಷತೆ ಮತ್ತು ರೈಲ್ವೆ ಆಸ್ತಿಗಳ ರಕ್ಷಣೆಯನ್ನು ಖಚಿತಪಡಿಸಿಕೊಳ್ಳಲು ಜಾಗರೂಕರಾಗಿ ಮತ್ತು ಬದ್ಧರಾಗಿರಲು ಪ್ರೇರೇಪಿಸುತ್ತದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಪ್ರಧಾನ ಮುಖ್ಯ ಸುರಕ್ಷತಾ ಅಧಿಕಾರಿ ಚಂದ್ರಕಿಶೋರ್ ಪ್ರಸಾದ್ ಮತ್ತು ಇತರ ಇಲಾಖೆಗಳ ಮುಖ್ಯಸ್ಥರು ಮತ್ತು ಕೇಂದ್ರ ರೈಲ್ವೆಯ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಬಿಕಾಂ ಪದವಿಯಲ್ಲಿ ವಿ.ವಿಗೆ ಪ್ರಥಮ ರ್‍ಯಾಂಕ್

ಕನ್ನಡ ಮಾತೃ ಭೂಮಿ ವಾರ್ತೆ

**ಕಾರಟಗಿ,ಏ.20-**ಕಡು ಬಡತನದ ನಡುವೆಯೂ ಓದುವ ಛಲವನ್ನು ಮುನ್ನಡೆಸಿದ ಕಾರ್ಮಿಕನ ಮಗಳು ರೇಖಾ ಉಪ್ಪಾರ ಬಿಕಾಂ ಪದವಿಯಲ್ಲಿ 95.06ರಷ್ಟು ಅಂಕ ಗಳಿಸಿ



ವಿಶ್ವವಿದ್ಯಾನಿಲಯಕ್ಕೆ ಪ್ರಥಮ ರ್‍ಯಾಂಕ್ ಬರುವುದರ ಮೂಲಕ ಗೋಲ್ಡ್ ಮೆಡಲ್ ತನ್ನದಾಗಿಸಿಕೊಂಡಿದ್ದಾಳೆ.

ಮಹಿಳಾ ಕಾಲೇಜಿನ ಹೆಮ್ಮೆಯ ವಿದ್ಯಾರ್ಥಿನಿ ಕುಮಾರಿ ರೇಖಾ ತಂದೆ ಪರಶುರಾಮ್ ಇವರಿಗೆ, ಏ.21ರಂದು ಮಂಗಳವಾರ ನಡೆಯಲಿರುವ ವಿಜಯಪುರ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ 17ನೇ ವಾರ್ಷಿಕ ಘಟಿಕೋತ್ಸವದಲ್ಲಿ ರಾಜ್ಯಪಾಲರಾದ ಥಾವರ್ ಚಂದ್ ಗೆಹಲೊಟರವರು ಚಿನ್ನದ ಪದಕ ಮತ್ತು ಪ್ರಶಸ್ತಿ ಪ್ರಧಾನ ಮಾಡಲಿದ್ದಾರೆ.

## ಏ.24ಕ್ಕೆ ಕೊಪ್ಪಳದಲ್ಲಿ ನಟಸಾರ್ವಭೌಮ ಡಾ.ರಾಜ್ ಸಂಭ್ರಮ : ಪೂರ್ವಭಾವಿ ಸಿದ್ಧತಾ ಸಭೆ

# ಮೇರುನಟ ಡಾ.ರಾಜ್‌ಕುಮಾರ್ ಜನ್ಮ ದಿನಾಚರಣೆ ಸಿದತೆಗೆ ಎಡಿಸಿ ಸೂಚನೆ

ಕನ್ನಡ ಮಾತೃ ಭೂಮಿ ವಾರ್ತೆ



**ಕೊಪ್ಪಳ,ಏ.20-** ಕೊಪ್ಪಳ ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಚಲನಚಿತ್ರ ಅಕಾಡೆಮಿಯ ಸಹಯೋಗದಲ್ಲಿ ಡಾ.ರಾಜ್‌ಕುಮಾರ್ ಜನ್ಮ ದಿನಾಚರಣೆಯ ಕಾರ್ಯ ಕ್ರಮ ರಾಜ್ ಸಂಭ್ರಮವು ಏ. 24 ರಂದು ಸಂಜೆ 5.30ಕ್ಕೆ ನಗರದ ಸಾಹಿತ್ಯ ಭವನದಲ್ಲಿ ಆಯೋಜಿಸಲಾಗಿದ್ದು, ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಎಡಿಸಿ ಸಿದ್ರಾಮೇಶ್ವರ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಡಾ.ರಾಜಕುಮಾರ ಜಯಂತಿ ಆಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕನ್ನಡದ ಮೇರು ನಟ, ನಟಸಾರ್ವಭೌಮ ಡಾ.ರಾಜ್‌ಕುಮಾರ್ ಅವರು ಈ ನಾಡು ಕಂಡ ನೆಚ್ಚಿನ ನಟರಾಗಿದ್ದಾರೆ. ಗೋಕಾಕ ಚಳವಳಿ ಸೇರಿದಂತೆ ಅನೇಕ ಕನ್ನಡಪರ ಹೋರಾಟಗಳಲ್ಲಿ ಭಾಗಿಯಾಗಿ ನಾಡು-ನುಡಿಗಾಗಿ ಮಹತ್ತರ ಸೇವೆ ಸಲ್ಲಿಸಿದ ಮಹನಿಯರಾಗಿದ್ದಾರೆ. ತಮ್ಮದೇ ಆದ ವಿಶೇಷ ನಟನೆಯಿಂದಾಗಿ ಕನ್ನಡಿಗರ ಮನೆಮಾತಾದ ಡಾ.ರಾಜಕುಮಾರ ಅವರು ಎಲ್ಲ ಬಗೆಯ ಪಾತ್ರಗಳಲ್ಲಿ ಮನಮಿಡಿಯುವಂತೆ ನಟಿಸಿ ಕಲಾರಾಧಕರ ಹೃದಯಗೆದ್ದಿದ್ದಾರೆ.

ಅಂತಹ ಮಹನಿಯರ ಜಯಂತಿ ಕಾರ್ಯಕ್ರಮ ಕೊಪ್ಪಳ ಜಿಲ್ಲೆಯಲ್ಲಿ ಸಹ ವಿಶೇಷವಾಗಿ ನಡೆಯಬೇಕು. ಇದಕ್ಕಾಗಿ ಜವಾಬ್ದಾರಿ ಹಂಚಿಕೆ ಮಾಡಿದಂತೆ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ಸಮನ್ವಯದಿಂದ ಕೆಲಸ ನಿರ್ವಹಿಸಿ, ಡಾ.ರಾಜ್ ಸಂಭ್ರಮ ಕಾರ್ಯಕ್ರಮವು ಅದ್ದೂರಿಯಾಗಿ ನಡೆಯುವಂತೆ ವ್ಯವಸ್ಥೆ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ, ಕನ್ನಡಾಭಿಮಾನಿಗಳ ಸಲಹೆಯಂತೆ ಹಾಗೂ ಸರ್ವ ಸದಸ್ಯರೆಲ್ಲರೂ ಚರ್ಚಿಸಿ ನಿರ್ಣಯಿಸಿದಂತೆ ಡಾ.ರಾಜ್ ಸಂಭ್ರಮ ಕಾರ್ಯಕ್ರಮದಲ್ಲಿ ಡಾ.ರಾಜಕುಮಾರ ಅವರ ಚಲನಚಿತ್ರ ಗೀತೆಗಳನ್ನು ಹಾಡಲು ಮತ್ತು ಡಾ.ರಾಜಕುಮಾರ ಅವರ ಸಿನೇಮಾದ ಡೈಲಾಗ್ (ಮಿಮಿಕ್ರಿ) ಹೇಳಲು ಆಸಕ್ತ ಕಲಾವಿದರು ಮತ್ತು ಎಲ್ಲ ಸಾರ್ವಜನಿಕರಿಗೆ ಅವಕಾಶ ಕಲ್ಪಿಸಬೇಕು. ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡಿ ವ್ಯಾಪಕ ಪ್ರಚಾರ ನಡೆಸಬೇಕು. ಡಾ.ರಾಜಕುಮಾರ ಅಭಿಮಾನಿಗಳು ಯಾರೇ ಇದ್ದರೂ ವಯಸ್ಸಿನ ಮಿತಿ ಹಾಕದೇ ಎಲ್ಲರಿಗೂ ಅವಕಾಶ ನೀಡಬೇಕು. ಕಾರ್ಯಕ್ರಮದಲ್ಲಿ ಕರೋಕೆ ಹಾಡುಗಾರರಿಗೆ ಆದ್ಯತೆ ನೀಡಿ ಡಾ.ರಾಜ್ ಸಂಭ್ರಮ ಕಾರ್ಯಕ್ರಮದ ಮೆರಗನ್ನು ಹೆಚ್ಚಿಸಲು ಅಗತ್ಯ ವ್ಯವಸ್ಥೆ ಮಾಡಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ನಗರ ಸಭೆ ಅಧಿಕಾರಿಗಳು ಸಾಹಿತ್ಯ ಭವನದಲ್ಲಿ ಕುಡಿಯುವ ನೀರಿನ ಮತ್ತು ಶುಚಿತ್ವದ ವ್ಯವಸ್ಥೆ ಮಾಡಬೇಕು. ಕಾರ್ಯಕ್ರಮದ ಅವಧಿಯಲ್ಲಿ ನಿರಂತರ ವಿದ್ಯುತ್ ಪೂರೈಸಲು ಜೆಸ್ಕಾಂ ಅಧಿಕಾರಿಗಳಿಗೆ ಪತ್ರ ಬರೆದು ತಿಳಿಸಲು ನಿರ್ದೇಶನ ನೀಡಿದರು. ಕಾರ್ಯಕ್ರಮದಲ್ಲಿ ಹಾಸ್ಟೇಲ್ ವಿದ್ಯಾರ್ಥಿಗಳು ಪಾಲ್ಗೊಳ್ಳುವಂತೆ ಅಗತ್ಯ ಏರ್ಪಾಡು ಮಾಡಲು ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿ ಕಲಾವಿದರ ಸಮನ್ವಯ ಮಾಡಲು ಸೂಚನೆ ನೀಡಿದರು.

ಬೆಂಗಳೂರಿನ ಕರ್ನಾಟಕ ಚಲನಚಿತ್ರ ಅಕಾಡೆಮಿಯ ಸದಸ್ಯರಾದ ಸಾವಿತ್ರಿ ಮುಜಮದಾರ ಅವರು ಮಾತನಾಡಿ, ಈ ಕಾರ್ಯಕ್ರಮಕ್ಕೆ ಕರ್ನಾಟಕ ಚಲನಚಿತ್ರ ಅಕಾಡೆಮಿ, ಬೆಂಗಳೂರು ಇವರ ಸಹಯೋಗ ಪಡೆದುಕೊಳ್ಳಬೇಕು.

ಕೊಪ್ಪಳ ಜಿಲ್ಲೆಯಲ್ಲಿ ಡಾ.ರಾಜ್‌ಕುಮಾರ್ ಅಭಿಮಾನಿಗಳ ಪಡೆಯಿದ್ದು ಅವರೆಲ್ಲರೂ ಭಾಗವಹಿಸುತ್ತಾರೆ. ಡಾ.ರಾಜ್‌ಕುಮಾರ್ ಅಭಿನಯದ ಚಲನಚಿತ್ರಗಳ ಹಾಡುಗಳು ಮತ್ತು ಅವರು ಹಾಡಿರುವ ಗೀತೆಗಳ ಗಾಯನಕ್ಕೆ ಮತ್ತು ಮಿಮಿಕ್ರಿ ಕಾರ್ಯಕ್ರಮಕ್ಕೆ ಅವಕಾಶ ನೀಡಿ ರಾಜ್ ಸಂಭ್ರಮ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಬೇಕು. ಗೋಕಾಕ್ ಚಳುವಳಿ ಸಂದರ್ಭದಲ್ಲಿ ಕೊಪ್ಪಳ ಜಿಲ್ಲೆಗೆ ಆಗಮಿಸಿದ್ದ ಡಾ.ರಾಜ್‌ಕುಮಾರ್ ಅವರೊಂದಿಗೆ ಮುಂಚೂಣಿಯಲ್ಲಿ ಭಾಗವಹಿಸಿದ ಹೋರಾಟಗಾರರು ಕೊಪ್ಪಳ ಜಿಲ್ಲೆಯಲ್ಲಿದ್ದು, ಅವರಿಗೆ ಈ ಕಾರ್ಯಕ್ರಮದಲ್ಲಿ ಸನ್ಮಾನಿಸುವ ವ್ಯವಸ್ಥೆ ಆಗಬೇಕು ಎಂದು ಮನವಿ ಮಾಡಿದರು.

ಕೊಪ್ಪಳ ಜಿಲ್ಲಾ ವಾರ್ತಾಧಿಕಾರಿ ಗವಿಸಿದ್ದಪ್ಪ ಹೊಸಮನಿ ಅವರು, ಡಾ. ರಾಜಕುಮಾರ ಜನ್ಮ ದಿನಾಚರಣೆ ಕುರಿತಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರು ಕಳುಹಿಸಿದ ಸುತ್ತೋಲೆಯನ್ನು ಸಭೆಗೆ ಓದಿ ಹೇಳಿದರು. ಪ್ರತಿ ವರ್ಷದಂತೆ ಈ ವರ್ಷವು ಸಹ ಜಿಲ್ಲಾಡಳಿತದ ಸಹಯೋಗದಲ್ಲಿ ಡಾ.ರಾಜ್‌ಕುಮಾರ್ ಜನ್ಮ ದಿನಾಚರಣೆಗೆ ಸಿದ್ಧತೆ ಮಾಡಲಾಗುತ್ತಿದೆ. ಈ ಬಾರಿ ಕೊಪ್ಪಳ ನಗರದ ಪ್ರಸಿದ್ಧ ಅಶೋಕ ವೃತ್ತದಲ್ಲಿನ ಸಾಹಿತ್ಯ ಭವನದಲ್ಲಿ ಕಾರ್ಯಕ್ರಮ ಆಯೋಜನೆ ಮಾಡಲಾಗುತ್ತಿದೆ. ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ನಿರ್ಣಯಿಸಿದಂತೆ, ಡಾ.ರಾಜಕುಮಾರ ಸಿನೇಮಾ ಗೀತೆಗಳ ಗಾಯನ ಮತ್ತು ಡಾ.ರಾಜ್ ಮಿಮಿಕ್ರಿಗೆ ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸುವ ಬಗ್ಗೆ ವ್ಯಾಪಕ ಪ್ರಚಾರ ನೀಡಲಾಗುವುದು. ವಿದ್ಯಾರ್ಥಿಗಳು, ಯುವಜನರು, ನೌಕರರು, ಅಧಿಕಾರಿಗಳು, ಕಲಾವಿದರು, ಮಹಿಳೆಯರು ಯಾರೇ ಇರಲಿ ಹೆಸರು ನೋಂದಾಯಿಸುವ ಪ್ರತಿಯೊಬ್ಬರಿಗೂ ನಿಯಮಾನುಸಾರ ಅವಕಾಶಕ್ಕೆ ಏರ್ಪಾಡು ಮಾಡಲಾಗುವುದು. ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳ ಸಮನ್ವಯದೊಂದಿಗೆ ಕಾರ್ಯಕ್ರಮದ ಸಿದ್ಧತೆ ನಡೆಸಲಾಗುವುದು ಎಂದು ತಿಳಿಸಿದರು.

ಕನ್ನಡ ಪರ ಹೋರಾಟಗಾರರಾದ ಮಹಾಂತೇಶ ಕೊತಬಾಳ ಅವರು ಮಾತನಾಡಿ, ಕೊಪ್ಪಳ ಜಿಲ್ಲೆಯಲ್ಲಿ ಡಾ.ರಾಜಕುಮಾರ ಅಭಿಮಾನಿಗಳ ಸಂಖ್ಯೆ ದೊಡ್ಡದಿದೆ. ಈ ಕಾರ್ಯಕ್ರಮದಲ್ಲಿ ಡಾ.ರಾಜ್‌ಕುಮಾರ ಅಭಿಮಾನಿಗಳು ಸೇರಿದಂತೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ಎಸ್.ಆರ್ ಪೂಜಾರ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಜಗದೀಶ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ್, ಸಮಾಜ ಕಲ್ಯಾಣ ಇಲಾಖೆಯ ಲೆಕ್ಕ ಅಧಿಕ್ಷಕರಾದ ಎ.ಆಂಜನೇಯ, ಉಷಾ ಮುಜುಮ್‌ದಾರ್, ಎ.ಬಸವರಾಜ, ಸಹಾಯಕ ಕೃಷಿ ನಿರ್ದೇಶಕರಾದ ರೇವಣಪ್ಪ ಮನಗೂಳಿ, ವಾರ್ತಾ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಹತ್ತಿಕುಣಿ ಕಾಲುವೆ ದುರಸ್ತಿ ಕಾಮಗಾರಿಗಳಿಗೆ 72 ಕೋ. ಅನುದಾನ- ಚಿಂಚನಸೂರ್ ಹರ್ಷ

ಕನ್ನಡ ಮಾತೃ ಭೂಮಿ ವಾರ್ತೆ



**ಯಾದಗಿರಿ,ಏ.20-**ಯಾದಗಿರಿ ಜಿಲ್ಲೆಯ ಗುರುಮಠಕಲ್ ಮತಕ್ಷೇತ್ರದ ವ್ಯಾಪ್ತಿಯ ಹತ್ತಿ ಕುಣಿ ಕ್ಲಸ್ಟರ್ ಯೋಜನೆಗೆ ಸಂಬಂಧಿಸಿದ 72 ಕೋಟಿ ರೂಪಾಯಿ ಮೊತ್ತದ ಕಾಮಗಾರಿಯ ವಿನ್ಯಾಸ ವರದಿಗೆ ರಾಜ್ಯ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿರುವುದಕ್ಕೆ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಬಾಬುರಾವ್ ಚಿಂಚನಸೂರ್ ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

ಈ ಯೋಜನೆಯು ಗುರುಮಠಕಲ್ ಮತಕ್ಷೇತ್ರದ ಹತ್ತಿಕುಣಿ, ಯಡ್ಡಳ್ಳಿ, ಹೊನಗೇರಾ, ಬಂದಳ್ಳಿ ಮತ್ತು ಮಂಡರಗಿ ಸೇರಿದಂತೆ ಬರಪೀಡಿತ ಗ್ರಾಮಗಳ ಸುಮಾರು 5,300 ಎಕರೆ ಕೃಷಿಯೋಗ್ಯ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸುವ ಉದ್ದೇಶ ಹೊಂದಿದೆ. ಇದರ ಮೂಲಕ ಸಾವಿರಾರು ರೈತರಿಗೆ ಅನುಕೂಲವಾಗಲಿದೆ ಎಂದು ಅವರು ತಿಳಿಸಿದ್ದಾರೆ.

ಪ್ರಸ್ತುತ ಶಿಥಿಲಾವಸ್ಥೆಯಲ್ಲಿರುವ ಹತ್ತಿಕುಣಿ ಜಲಾಶಯ ಕಾಲುವೆಯ ದುರಸ್ತಿಯೂ ಈ ಅನುದಾನದಲ್ಲಿ ನಡೆಯಲಿದೆ. ಗುರುಮಠಕಲ್ ಮತಕ್ಷೇತ್ರದ ರೈತರ ದಶಕಗಳ ಕಾಲದ ಕನಸಾಗಿದ್ದ ಹತ್ತಿಕುಣಿ ಕಾಡಾ ನಾಲಾ ಆಧುನೀಕರಣ ಯೋಜನೆಗೆ ಸಚಿವ ಸಂಪುಟದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ, ಹತ್ತಿಕುಣಿ, ಕಟಗಿ ಶಹಾಪುರ, ಹೊನಗೇರಿ, ಯಡ್ಡಳ್ಳಿ, ಬಂದಳ್ಳಿ ಸೇರಿದಂತೆ ಮುಂತಾದ ಗ್ರಾಮಗಳ ವ್ಯಾಪ್ತಿಯ ಸುಮಾರು 5,300 ಎಕರೆ ಕೃಷಿ ಭೂಮಿಗೆ ಶಾಶ್ವತ ನೀರಾವರಿ ಸೌಲಭ್ಯ ಸಿಗಲಿದೆ ಎಂದು ಬಾಬುರಾವ್ ಚಿಂಚನಸೂರ್ ಅಭಿಪ್ರಾಯಪಟ್ಟಿದ್ದಾರೆ.

ಇತ್ತೀಚೆಗೆ ನಡೆದ ವಿಧಾನಸಭೆ ಅಧಿವೇಶನದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಈ ವಿಷಯವನ್ನು ಸರ್ಕಾರದ ಗಮನಕ್ಕೆ ತಂದಿದ್ದು, ಅದನ್ನು ಗಂಭೀರವಾಗಿ ಪರಿಗಣಿಸಿ ಅನುಮೋದನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರಕ್ಕೂ ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ಅವರು ಕೃತಜ್ಞತೆಗಳನ್ನು ಪ್ರಕಟಣೆಯಲ್ಲಿ ಸಲ್ಲಿಸಿದ್ದಾರೆ.

## ಇಂದು ವಿದ್ಯುತ್ ಗ್ರಾಹಕರ ಕುಂದು-ಕೊರತೆ ಸಭೆ

**ಬಳ್ಳಾರಿ,ಏ.18-** ಬಳ್ಳಾರಿ ನಗರದ ಜೆಸ್ಕಾಂ ಉಪ-ವಿಭಾಗದಢ 1 ಮತ್ತು 2 ರ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ಸಭೆ ಹಾಗೂ ಎಸ್‌ಓಪಿ ಬಗೆಗಿನ ಜಾಗೃತಿ ಸಭೆಯನ್ನು ಏ.21 ರಂದು ಬೆಳಿಗ್ಗೆ 10.30 ಗಂಟೆಗೆ ನಗರ ಉಪ-ವಿಭಾಗದಲ್ಲಿ ಆಯೋಜಿಸಲಾಗಿದ್ದು, ಕುಂದು-ಕೊರತೆಗಳಿರುವ ವಿದ್ಯುತ್ ಗ್ರಾಹಕರು ಸಭೆಯಲ್ಲಿ ಭಾಗವಹಿಸಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-1 ರ ಸಹಾಯಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ...ಮೊದಲನೇ ಪುಟದಿಂದ

## ನಾಲ್ಕು ತಾಸು ಆಕಾಶದಲ್ಲಿ ಹಾರಾಡಿ ಬೆಂಗಳೂರಿನಲ್ಲಿ ಸುರಕ್ಷಿತವಾಗಿ ಲ್ಯಾಂಡ್ ಆದ ವಿಮಾನ

ಕುಮಾರ್ ಸ್ಪಷ್ಟನೆ ನೀಡಿದ್ದಾರೆ. ಸುಮಾರು ಸಮಯ ವಿಮಾನದ ಸುತ್ತಾಟದಿಂದ ಆತಂಕಗೊಂಡ ಪ್ರಯಾಣಿಕರು ಕಣ್ಣೀರು ಹಾಕುತ್ತಾ ತಮ್ಮ ಕುಟುಂಬಸ್ಥರಿಗೆ ವಿಡಿಯೋ ಸಂದೇಶ ರವಾನಿಸಿದ್ದಾರೆ. ಬೆಂಗಳೂರು ಅಥವಾ ಬೆಳಗಾವಿ ವಿಮಾನ ನಿಲ್ದಾಣಕ್ಕೆ ಡೈವರ್ಟ್ ಮಾಡುವಂತೆ ಕೆಲ ಪ್ರಯಾಣಿಕರು ಭಯದಿಂದ ಕಣ್ಣೀರು ಹಾಕಿರುವ ದೃಶ್ಯ ವಿಡಿಯೋದಲ್ಲಿ ಸೆರೆಯಾಗಿದ್ದು, ಜಾಲತಾಣದಲ್ಲಿ ವೈರಲ್ ಆಗಿದೆ. ಬಳಿಕ ಬೆಂಗಳೂರಿನಿಂದ ಅದೇ ವಿಮಾನ ನಿನ್ನೆ ರಾತ್ರಿ 9.30ಕ್ಕೆ ಬೆಂಗಳೂರಿನಿಂದ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಬಂದು ಲ್ಯಾಂಡ್ ಆಯಿತು. ಬಳಿಕ ಇಲ್ಲಿಂದ ಹೈದರಾಬಾದ್‌ಗೆ ಪ್ರಯಾಣಿಸುವ ಪ್ರಯಾಣಿಕರನ್ನು ಸುರಕ್ಷಿತವಾಗಿ ಕರೆದೊಯ್ದಿದೆ ಎಂದು ವಿಮಾನ ನಿಲ್ದಾಣ ನಿರ್ದೇಶಕರು ಮಾಹಿತಿ ನೀಡಿದ್ದಾರೆ.

## ಶಾಸಕ ಎನ್.ಎ ಹ್ಯಾರಿಸ್‌ಗೆ ಸಂಬಂಧಿಸಿದ ಸ್ಥಳಗಳ ಮೇಲೆ ಇಡಿ ದಾಳಿ

ನಲಪಾಡ್ ವಿರುದ್ಧ ಕೇಳಿ ಬಂದಿತ್ತು. ಹಿಂದೆ ವಿಶೇಷ ತನಿಖಾ ದಳ (ಖಐಖ) ನಲಪಾಡ್ ಅವರನ್ನು ವಿಚಾರಣೆಗೊಳಪಡಿಸಿತ್ತು.

ಬಿಟ್ ಕಾಯಿನ್ ಹಗರಣದಲ್ಲಿ ಕೋಟ್ಯಂತರ ರೂಪಾಯಿ ಹಣದ ವರ್ಗಾವಣೆ ನಡೆದಿದೆ ಎಂಬ ಅನುಮಾನದ ಮೇಲೆ ಎಸ್‌ಐಟಿ ನಲಪಾಡ್‌ಗೆ ನೋಟಿಸ್ ನೀಡಿತ್ತು. ಇದರ ಬೆನ್ನಲ್ಲೇ ಈಗ ಇಡಿ ದಾಳಿ ನಡೆದಿರುವುದು ಅನುಮಾನಕ್ಕೆ ಕಾರಣವಾಗಿದೆ. ಈ ಬಗ್ಗೆ ಇಡಿಯಿಂದ ಅಧಿಕೃತ ಪ್ರಕಟಣೆ ಲಭ್ಯವಾಗಬೇಕಿದೆ.

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪ: ದೇಶದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ನಿರಂತರವಾಗಿ ಆರ್ಥಿಕ ಅಪರಾಧಗಳು ನಡೆಯುತ್ತಿವೆ. ಬಿಟ್ ಕಾಯಿನ್ ಮೂಲಕ ಬೇರೆ ಬೇರೆ ದೇಶಗಳಲ್ಲಿ ಕಾಂಗ್ರೆಸ್ ರಾಜಕಾರಣಿಗಳು ಬಂಡವಾಳ ಹೂಡಿಕೆ ಮಾಡಿದ್ದಾರೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪಿಸಿದ್ದಾರೆ.

ಮಲ್ಲೇಶ್ವರದ ಎಸ್.ಎಚ್.ವಿ.ಎನ್.ಎಂ ಪದವಿಪೂರ್ವ ಕಾಲೇಜಿನಲ್ಲಿ ಡಾ.ಸಿ.ಎನ್.ಅಶ್ವತ್ಥನಾರಾಯಣ ಪ್ರತಿಷ್ಠಾನದಿಂದ ಹಮ್ಮಿಕೊಂಡಿದ್ದ 'ಯುವೋತ್ಸವ' ಕಾರ್ಯಕ್ರಮದ ಬಳಿಕ ಶಾಸಕ ಎನ್.ಎ. ಹ್ಯಾರಿಸ್ ಅವರ ಮನೆ ಮೇಲೆ ಇಡಿ ದಾಳಿ ಕುರಿತು ಅವರು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ, ಇದರಲ್ಲಿ ಬಿಟ್ ಕಾಯಿನ್ ಸಹ ಒಂದು. ಬಿಟ್ ಕಾಯಿನ್‌ನಲ್ಲಿ ಹೂಡಿಕೆ ಆಗಿದೆ ಎಂಬ ಮಾಹಿತಿ ಆಧರಿಸಿ ದಾಳಿ ನಡೆದಿದೆ ಎಂದರು.

ತಪ್ಪು ಮಾಡಿದವರಿಗೆ ಶಿಕ್ಷೆ ಆಗಬೇಕು. ಯಾವುದೇ ನಿಖರ ಮಾಹಿತಿ ಇಲ್ಲದೆ ದಾಳಿ ನಡೆದಿಲ್ಲ. ಎಲ್ಲದರಲ್ಲೂ ಕಾಂಗ್ರೆಸ್‌ನವರು ತಪ್ಪಿಸಿಕೊಳ್ತಾರೆ. ರಾಜ್ಯದಲ್ಲಿನ ಹಣವನ್ನು ಲೂಟಿ ಮಾಡಿ ಬೇರೆ ದೇಶಗಳಿಗೆ ಸಾಗಿಸಿ, ಅಲ್ಲಿ ಹೂಡಿಕೆ ಮಾಡ್ತಾರೆ. ಕಾಂಗ್ರೆಸ್ ಸರ್ಕಾರ ಭ್ರಷ್ಟ ಸರ್ಕಾರ ಎಂದರು.

ಮಾಜಿ ಡಿಸಿಎಂ ಡಾ.ಸಿ.ಎನ್.ಅಶ್ವತ್ಥನಾರಾಯಣ ಮಾತನಾಡಿ, ಇಡಿ ದಾಳಿಗೆ ಸಂಬಂಧಿಸಿದಂತೆ ಬಿಜೆಪಿಯ ಮೇಲೆ ಆರೋಪ ಮಾಡುವುದು ಸರಿಯಾದ ಕ್ರಮವಲ್ಲ. ತನಿಖೆ ನಡೆಸಿ ಸತ್ಯ ಹೊರಬರಲಿ ಎಂದು ತಿಳಿಸಿದರು.

## ವಾಣಿಜ್ಯೋದ್ಯಮ ಸಂಘ, ಐಎಂಐ ಕಾರ್ಯ ಮಾದರಿಯಾಗಿದೆ-ಜೋಬಿನ್ ಮಹೋಪಾತ್ರ

ಐಎಂಎ ಅಧ್ಯಕ್ಷ ಡಾ.ಶೈಲೇಶ ಅಮರಖೇಡ್, ದಿನೇಶ ದಫ್ತಾರಿ, ಬಿ.ಮೋಹನ್, ಕೆ.ವಿ.ಮನೋಹರ, ಎಸ್. ಕಮಲಕುಮಾರ ಜೈನ್, ಜಗದೀಶ ಗುಪ್ತಾ, ಈರಣ್ಣ ಚಿತ್ರಗಾರ ಇವರು ನೀಡಿದ ದೇಣಿಗೆಯಿಂದ ಓಆರ್‌ಎಸ್ ಪ್ಯಾಕೇಟ್ ನೀಡಲಾಗಿದೆ ಎಂದು ರಾಯಚೂರು ವಾಣಿಜ್ಯೋದ್ಯಮ ಸಂಘದ ಅಧ್ಯಕ್ಷ ಎಸ್.ಕಮಲಕುಮಾರ ಜೈನ್ ಹೇಳಿದರು. ದಾನಿಗಳಿಗೆ ಸನ್ಮಾನಿಸಿಗೌರವಿಸಲಾಯಿತು. ಈ ಸಂದರ್ಬದಲ್ಲಿ ವಸಂತಕುಮಾರ ಪತಂಗೆ, ವೆಂಕಟರಾಜ ಗುಪ್ತ, ಪಾಲಿಕೆ ಅಧಿಕಾರಿ ಕೃಷ್ಣ ಶಾವಂತಗೇರಾ, ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೊಸಗಿ, ಪಾಲಿಕೆ ಸಮೂದಾಯ ಅಧಿಕಾರಿ ಕೃಷ್ಣ ಕಟ್ಟಿಮನಿ, ಆರೋಗ್ಯ ನಿರೀಕ್ಷಕ ಬಾಬಾಖಾನ್ ಸೇರಿದಂತೆ ಅನೇಕರಿದ್ದರು.

## ಸಮ ಸಮಾಜ ನಿರ್ಮಾಣ ಕನಸು ಸಾಕಾರಕ್ಕೆ ಬಸವಣ್ಣನವರೇ ಪ್ರೇರಣೆ-ಡಾ.ಶಿವರಾಜ ಪಾಟೀಲ್

ಅವಶ್ಯಕತೆವಾಗಿವೆ, 12ನೇ ಶತಮಾನದಲ್ಲೆ ಮಹಿಳೆಯರಿಗೆ ಆದ್ಯತೆ ನೀಡಿದ್ದು ಪ್ರಮುಖ ಪಾತ್ರವಹಿಸುತ್ತದೆ ಎಂದರು. ಅವರ ಮಾರ್ಗದಲ್ಲಿ ನಾವೆಲ್ಲರೂ ಅನುಸರಿಕೊಂಡು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಹೋದಾಗ ಮಾತ್ರ ಅವರು ಕಂಡ ಸಮ ಸಮಾಜ ನಿರ್ಮಾಣ ಸಾಧ್ಯವೆಂದರು. ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ ಮಾತನಾಡಿ, ಬಸವಣ್ಣನವರು ತಮ್ಮ ಶರೀರವನ್ನು ಇಷ್ಟಲಿಂಗವನ್ನಾಗಿಸಿಕೊಂಡು ಕಾಯಕದಲ್ಲಿ ಕೈಲಾಸವನ್ನು ಕಂಡವರು, ಅವರ ಜೀವನದ ಅನುಭವಗಳನ್ನು ತತ್ವಾದರ್ಶಗಳು ನಮ್ಮ ಜೀವನದಲ್ಲಿ ಅಳವಡಿಸಿಕೊ ಳ್ಳಬೇಕೆಂದರು.

ಶರಣ ಸಾಹಿತಿ ಶಿವಬುದ್ದಿ ಹಲ್ಲರೆ ಅವರು ಉಪನ್ಯಾಸಕರಾಗಿ ಮಾತನಾಡಿ, ಬಸವಣ್ಣನವರು ಅನೇಕ ಶರಣನ್ನು ಒಗ್ಗೂಡಿಸಿಕೊಂಡು ಸಮ ಸಮಾಜ ನಿರ್ಮಾಣಕ್ಕೆ ಧಾರ್ಮಿಕ ಚಳುವಳಿ ಗಳನ್ನು ಮಾಡಿದರು, ಬಸವಣ್ಣನವರು ತತ್ವಾದರ್ಶ ಗಳನ್ನಿಟ್ಟುಕೊಂಡು ಅನೇಕರು ಬೀದಿ ನಾಟಕಗಳ ಮೂಲಕ ಜಾಗೃತಿ ಮೂಡಿಸಿದರು, ಬಸವೇಶ್ವರ ಜೊತೆಗೆ ಅನೇಕ ಶರಣರು ಒಗ್ಗೂಡಿಕೊಂಡು ಅನುಭವ ಮಂಟಪದಲ್ಲಿ ಸಮಾಜದ ಒಳಿತಿಗಾಗಿ ಅನೇಕ ವಿಷಯಗಳನ್ನು ಚರ್ಚೆ ನಡೆಸಿದರು. 12ನೇ ಶತಮಾನದಲ್ಲಿ ಜಗತ್ತಿಗೆ ಅನುಭವ ಮಂಟಪ ಪರಿಚಯಿಸಿದರು, ಹೊಸ ಸಂಸತ್ತು ಉದ್ಘಾಟನೆ ವೇಳೆ ಪ್ರಧಾನಿ ಮಂತ್ರಿಗಳು ಬಸವೇಶ್ವರರನ್ನು ನೆನೆದು ಅನುಭವ ಮಂಟಪ ಗಮನ ನೆಳೆದರು. ಬಸವೇಶ್ವರರು ತಮ್ಮ ವಚನಗಳ ಮೂಲಕ ಅನೇಕ ಸಮಾಜದ ವಿರುದ್ಧವಾಗಿರುವ ಅನಿಷ್ಟ ಪದ್ಧತಿಗಳ ನಿರ್ಮೂಲನೆಗೆ ಶ್ರಮಿಸಿದರು.ಅವರ ಜೊತೆಗೆ ಅನೇಕ ಶರಣರು ಸಹ ಜೊತೆಗೂಡಿ ಸಮಾಜದಲ್ಲಿ ಅನಿಷ್ಟ ಪದ್ಧತಿ ನಿರ್ಮೂಲನೆ ವಿರುದ್ಧ ವಚನಗಳ ಮೂಲಕ ಜಾಗೃತಿಗೊಳಿಸಿದರು ಎಂದರು. ಈ ಸಂದರ್ಭದಲ್ಲಿ ಎಪಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನ ಗೌಡ, ತಹಶಿಲ್ದಾರ್ ಸುರೇಶ ವರ್ಮಾ, ಜಿಪಂ ಉಪ ಕಾರ್ಯದರ್ಶಿ ಹಾಲ್ ಸಿದ್ದಪ್ಪ ಪೂಜಾರಿ, ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಚಂದ್ರಶೇಖರ ಮಿರ್ಜಾಪೂರ, ಜಿಲ್ಲಾ ವೀರಶೈವ ಸಮಾಜದ ಅಧ್ಯಕ್ಷ ಶರಣ ಭೂಪಾಲ ನಾಡಗೌಡ, ಪಾಲಿಕೆ ಅಧಿಕಾರಿಗಳು ಇದ್ದರು.

## ಬಸವ ಜಯಂತಿ ಅಂಗವಾಗಿ ಸಚಿವ ಬೋಸರಾಜ, ಶಾಸಕ ಡಾ.ಶಿವರಾಜ ಪಾಟೀಲ್ ಸೇರಿ ಗಣ್ಯರಿಂದ ಮಾಲಾರ್ಪಣೆ

ಮಾಡಿದರು. ಯುವ ಕಾಂಗ್ರೆಸ್ ಮುಖಂಡ ರವಿ ಬೋಸರಾಜ, ವಿಶ್ವನಾಥ ಪಟ್ಟಿ, ಶರಣಬಸವ ಜೋಳದಡಗಿ, ರವೀಂದ್ರ ಜಲ್ದಾರ, ಶೇಖರ ವಾರದ, ಮಹಾದೇವಪ್ಪ ಮಿರ್ಜಾಪುರು, ಕೆ.ಎಂ.ಪಾಟೀಲ್, ಎನ್.ಗಿರಿಜಾಶಂಕರ, ಜಿ.ಶಿವಮೂರ್ತಿ, ಪ್ರಭು ಶಾಸ್ತ್ರಿ, ಪ್ರಭುಗೌಡ ಹಂಚಿನಾಳ, ಡಾ.ಎನ್.ಶಿವುಕುಮಾರ,ದಂಡಪ್ಪ ಬಿರಾದಾರ ಸೇರಿದಂತೆ ಅನೇಕ ಸಂಘಟನೆಗಳ ಮುಖಂಡರುಗಳು, ರಾಜಕೀಯ ನಾಯಕರು ಮಾಲಾರ್ಪಣೆ ಮಾಡಿದರು. ರಾಯಚೂರು: ಜಿಲ್ಲಾ ಜೆಡಿಎಸ್ ಪಕ್ಷದಿಂದ ಬಸವೇಶ್ವರ ಜಯಂತಿ ಅಂಗವಾಗಿ ಶ್ರೀ ಬಸವೇಶ್ವರ ಪುತ್ಥಳಿಗೆ ಮಾರ್ಲಾಪಣೆ ಮಾಡಲಾಯಿತು. ಜಿಲ್ಲಾ ಕಾರ್ಯಾಧ್ಯಕ್ಷ ಎನ್. ಶಿವಶಂಕರ ವಕೀಲ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮಕೃಷ್ಣ ,ರಾಮನಗೌಡ ಏಗನೂರು, ಜಿಲ್ಲಾ ಪರಿಶಿಷ್ಟ ಘಟಕ ಅಧ್ಯಕ್ಷ ನರಸಪ್ಪ ಆಶಾಪೂರ, ಮುಖಂಡರಾದ ಅಲಂಬಾಬು, ರಾಜು ಹರಿಜನವಾಡ, ಈರಣ್ಣ ಯಾದವ, ಆದಿರಾಜ, ಅವಿಲ್,ನರಸಿಂಹ, ವೆಂಕಟ್ ಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಹೊಸ ಜನಗಣತಿಯಾದ ನಂತರ ಮಾಡುವುದು ಸೂಕ್ತ: ಸಿಎಂ ಸಿದ್ದರಾಮಯ್ಯ ಅಭಿಮತ

ಕಾಯಬೇಕಿರಲಿಲ್ಲ: ಸಂವಿ ಧಾನಕ್ಕೆ 73, 74ನೇ ತಿದ್ದುಪಡಿಯನ್ನು ತಂದಿದ್ದು ಕಾಂಗ್ರೆಸ್ ಪಕ್ಷ. ಸ್ಥಳೀಯ ಸಂಸ್ಥೆಗಳಲ್ಲಿ 50% ಮಹಿಳಾ ಮೀಸಲಾತಿ ತಂದಿದ್ದು ಕೂಡ ಕಾಂಗ್ರೆಸ್ ಪಕ್ಷವೇ. 2023ರಲ್ಲಿಯೇ ಮಹಿಳಾ ಮೀಸಲಾತಿ ಮಸೂದೆ ಅಂಗೀಕಾರವಾಗಿದ್ದು ಆಗಲೇ ಅದನ್ನು ಜಾರಿ ಮಾಡಬೇಕಿತ್ತು, ಇಲ್ಲಿಯ ವರೆಗೆ ಏಕೆ ಕಾಯಬೇಕಿತ್ತು ಎಂದು ಪ್ರಶ್ನಿಸಿದರು.

ವಿರೋಧಿಸಿದವರೇ ಗ್ಯಾರಂಟಿ ಕೊಡುತ್ತಿ ದ್ದಾರೆ: ಗ್ಯಾರಂಟಿಗಳನ್ನು ಎಲ್ಲಾ ಪಕ್ಷಗಳು ತಮ್ಮ ಪ್ರಣಾಳಿಕೆಯಲ್ಲಿ ಸೇರಿಸಿರುವ ಬಗ್ಗೆ ಮಾತನಾಡಿ 2023ರಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ವಿರೋಧಿಸಿದ್ದರು. ಈಗ ಅವರೇ ಯೋಜನೆಗಳನ್ನು ಘೋಷಿಸುತ್ತಿದ್ದಾರೆ ಎಂದರು.

ಮಹಿಳಾ ಮೀಸಲಾತಿ ಪರವಾಗಿದ್ದೇವೆ ಎಂದು ಪ್ರಧಾನಿಗಳಿಗೆ ತಿಳಿಸಿದೆ: ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿಯವರು ಬೆಂಗಳೂ ರಿಗೆ ಆಗಮಿಸಿದ ಸಂದರ್ಭದಲ್ಲಿ ಮುಖ್ಯಮಂತ್ರಿ ಹಾಗೂ ಪ್ರಧಾನಿ ನಡುವೆ ಆದ ಮಾತುಕತೆಯ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು, ಮಹಿಳಾ ಮೀಸಲಾತಿ ಬಗ್ಗೆ ನಿಮ್ಮ ನಿಲುವೇನು ಎಂದು ಪ್ರಧಾನಿಗಳು ಕೇಳಿದ್ದರು. ನಾವು ಮಹಿಳಾ ಮೀಸಲಾತಿಯ ಪರವಾಗಿದ್ದೇವೆ ಎಂದು ತಿಳಿಸಿದ್ದಾಗಿ ಮುಖ್ಯಮಂತ್ರಿಗಳು ಹೇಳಿದರು.

ಪ್ರಧಾನಿಗಳು ಸಾಮಾಜಿಕ ನ್ಯಾಯದ ಪರವಾಗಿಲ್ಲ: ಮಹಿಳಾ ಮೀಸಲಾತಿ ಮಸೂದೆಯನ್ನು ತಿರಸ್ಕರಿಸುವ ಮೂಲಕ ಕಾಂಗ್ರೆಸ್ ಭ್ರೂಣ ಹತ್ಯೆ ಮಾಡಿದೆ ಎಂದು ಪ್ರಧಾನಿಗಳು ಆರೋಪಿಸಿರುವ ಬಗ್ಗೆ, ಪ್ರಧಾನಿಗಳದ್ದು ತಾರತಮ್ಯದ ಧೋರಣೆಯಾಗಿದ್ದು, ಅವರು ಸಾಮಾಜಿಕ ನ್ಯಾಯದ ಪರವಾಗಿಲ್ಲ ಎಂದು ಟಾಂಗ್ ಕೊಟ್ಟರು. ಅವರು ಅಧಿಕಾರಕ್ಕೆ ಬಂದು 12 ವರ್ಷಗಳಲ್ಲಿ ಮಹಿಳಾ ಮೀಸಲಾತಿ ಏಕೆ ಜಾರಿ ಮಾಡಲಿಲ್ಲ. ಈಗಲೂ 2023ರ ಪ್ರಕಾರ ಜಾರಿ ಮಾಡಲಿ. ಕ್ಷೇತ್ರ ಮರು ವಿಂಗಡಣೆಯನ್ನು ಜನಗಣತಿಯಾದ ನಂತರ ಮಾಡಿದರೆ ಸೂಕ್ತ. ಲೋಕಸಭಾ ಸ್ಥಾನಗಳನ್ನು ಶೇಕಡ 50% ರಷ್ಟು ಹೆಚ್ಚು ಮಾಡುವುದಾಗಿ ಹೇಳಿದ್ದು, ದಕ್ಷಿಣ ಭಾರತದ ರಾಜ್ಯಗಳಿಗೆ ಅನ್ಯಾಯವಾಗುತ್ತದೆ. ಜನಗಣತಿ ಮಾಡಿ ಎಲ್ಲರಿಗೂ ಸಮಾನವಾಗಿ ಸ್ಥಾನಗಳನ್ನು ಕೊಡಬೇಕು ಎಂದು ಸಿಎಂ ಒತ್ತಾಯಿಸಿದರು.

ಕ್ಷೇತ್ರ ಮರು ವಿಂಗಡಣೆಯಿಂದ ದಕ್ಷಿಣ ಭಾರತದ ರಾಜ್ಯಗಳಿಗೆ ಅನ್ಯಾಯ: ಜನಸಂಖ್ಯೆ ನಿಯಂತ್ರಣವನ್ನು ದಕ್ಷಿಣ ಭಾರತದ ರಾಜ್ಯಗಳು ಉತ್ತಮವಾಗಿ ಮಾಡಿದ್ದು, ಉತ್ತರ ಭಾರತದ ರಾಜ್ಯಗಳು ಮಾಡಿಲ್ಲ. ಸಹಜವಾಗಿಯೇ ಅವರಿಗೆ ಅನುಕೂಲ ಹಾಗೂ ದಕ್ಷಿಣ ಭಾರತದ ರಾಜ್ಯಗಳಿಗೆ ಅನಾನುಕೂಲವಾಗಲಿದೆ ಎಂದು ಉತ್ತರಿಸಿದರು.

ಬಹುಮತವಿಲ್ಲ ಎಂದು ಗೊತ್ತಿದ್ದು ಮಸೂದೆಯನ್ನು ಮಂಡಿಸಬಾರದಿತ್ತು: ಮುಂದಿನ ದಿನಗಳಲ್ಲಿ ಕಾಂಗ್ರೆಸ್ಸಿಗೆ ಜನ ಪಾಠ ಕಲಿಸಲಿದ್ದಾರೆ ಎಂಬ ಪ್ರಧಾನಿ ಅವರ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಸಿಎಂ, ಪ್ರಧಾನಿಗಳು ರಾಜಕೀಯ ಮಾಡುತ್ತಿದ್ದಾರೆ. ಮೂರನೇ ಎರಡರಷ್ಟು ಬಹುಮತವಿಲ್ಲ ಎಂದು ಗೊತ್ತಿದ್ದೂ ಮಹಿಳಾ ಮೀಸಲಾತಿ, ಕ್ಷೇತ್ರ ಮರು ವಿಂಗಡಣೆಯನ್ನು ಒಟ್ಟಿಗೆ ತರಬೇಕಾದ ಅಗತ್ಯವಿರಲಿಲ್ಲ ಎಂದು ಹೇಳಿದರು.

ಇಡಿ ದಾಳಿ ಬಗ್ಗೆ ಸಿಎಂ ಹೇಳಿಕೆ: ಶಾಸಕ ಎನ್.ಎ. ಹ್ಯಾರೀಸ್ ಅವರ ಮನೆಯ ಮೇಲೆ ಇಡಿ ದಾಳಿಯಾಗಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ ಈ ಬಗ್ಗೆ ನನಗೆ ತಿಳಿದಿಲ್ಲ ಎಂದರು. ಕೇರಳದಲ್ಲಿ ಕಾಂಗ್ರೆಸ್ ಗೆಲ್ಲಲಿದೆ: ಮೂಲಗಳ ಪ್ರಕಾರ ತಮಿಳುನಾಡಿನಲ್ಲಿ ಡಿಎಂಕೆ ಮತ್ತು ಮಿತ್ರ ಪಕ್ಷಗಳು ಗೆಲ್ಲಲಿದ್ದು ಕೇರಳದಲ್ಲಿ ಕಾಂಗ್ರೆಸ್ ಪಕ್ಷ ಗೆಲ್ಲಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

# ಲಕ್ಷಗಟ್ಟಲೆ ಹಣ್ ಪಡೆದು ದುರುಪಯೋಗ : ವಚನಾನಂದ ಶ್ರೀ ವಿರುದ್ಧ ಪೊಲೀಸರಿಗೆ ದೂರು

**ದಾವಣಗೆರೆ,ಏ.20**–ಪಂಚಮಸಾಲಿ ಗುರುಪೀಠದ ಒಳಜಗಳ ಮುಂದುವರಿದಿದೆ. ವಚನಾನಂದ ಸ್ವಾಮೀಜಿ ಹರಜಾತ್ರೆ ಸಂದರ್ಭದಲ್ಲಿ ಭಕ್ತರಿಂದ ಲಕ್ಷಾಂತರ ರೂಪಾಯಿ ಹಣ್ ಪಡೆದು ದುರುಪಯೋಗ ಮಾಡಿದ್ದಾರೆ ಮತ್ತು ಶ್ವಾಸ ಕೇಂದ್ರದ ಸಂಪರ್ಕದಲ್ಲಿದ್ದಾರೆ ಎಂದು ಆರೋಪಿಸಿ ಪಂಚಮಸಾಲಿ ಮಠದ ಟ್ರಸ್ಟ್‌ನ ಪ್ರಧಾನ ಧರ್ಮದರ್ಶಿ ಬಿ.ಸಿ.ಉಮಾಪತಿ ಅವರು ದಾವಣಗೆರೆಯ ಹರಿಹರ ಗ್ರಾಮಾಂತರ ಪೊಲೀಸ್ ಠಾಣೆಗೆ ಲಿಖಿತ ದೂರು ನೀಡಿದ್ದಾರೆ.



ಲಕ್ಷಾಂತರ ರೂಪಾಯಿ ಹಣ ಸಂಗ್ರಹಿಸಿ ತಮ್ಮ ಸ್ವಂತ ಖಾತೆಗೆ ವರ್ಗಾಯಿಸಿಕೊಂಡಿದ್ದು, ಇವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ದೂರಿನಲ್ಲಿ ಟ್ರಸ್ಟ್ ಪ್ರಧಾನ ಧರ್ಮದರ್ಶಿ ಒತ್ತಾಯಿಸಿದ್ದಾರೆ.

2018ರ ಏಪ್ರಿಲ್‌ನಲ್ಲಿ ಪಂಚಮಸಾಲಿ ಗುರುಪೀಠಕ್ಕೆ ವಚನಾನಂದ ಸ್ವಾಮೀಜಿ ನೇಮಕವಾಗಿದ್ದಾರೆ. ಆ ವೇಳೆ ಬೆಂಗಳೂರಿನಲ್ಲಿರುವ ಶ್ವಾಸ ಪೀಠ ಬಿಡುವಂತೆ ಷರತ್ತು ವಿಧಿಸಲಾಗಿತ್ತು. ಆದ್ರೆ ಅವರು ಶ್ವಾಸ ಸಂಸ್ಥೆಯನ್ನು ಸಂಪೂರ್ಣವಾಗಿ ಬಿಟ್ಟಿಲ್ಲ. ಈ ಬಗ್ಗೆ ಸ್ವಾಮೀಜಿಗೆ ಹಲವು ಬಾರಿ ಟ್ರಸ್ಟ್ ಸೂಚಿಸಿತ್ತು. ಅಲ್ಲದೇ, 2026ರ ಹರಜಾತ್ರೆಯಲ್ಲಿ ಭಕ್ತರಿಂದ

ದೂರಿನ ವಿವರ: ಬೆಂಗಳೂರಿನಲ್ಲಿ ವೈಯಕ್ತಿಕವಾಗಿ ಶ್ವಾಸ ಕೇಂದ್ರ ಎಂಬ ಸಂಸ್ಥೆಯನ್ನು ಸ್ವಾಮೀಜಿ ನಡೆಸುತ್ತಿದ್ದರು. ಮಠದ ಶ್ರೀಗಳಾಗಿ ಆಯ್ಕೆಯಾದ ನಂತರ ಅದರ ಸಂಪೂರ್ಣ ವ್ಯವಹಾರದಿಂದ ಮತ್ತು ಬಾಂಧವ್ಯದಿಂದ ಮುಕ್ತಿ ಹೊಂದುವಂತೆ ಷರತ್ತು ಹಾಕಲಾಗಿತ್ತು.

ಆದರೆ ಶ್ರೀಗಳು ಶ್ವಾಸ ಕೇಂದ್ರದ ಸಂಪೂರ್ಣ ಸಂಪರ್ಕ ಬಿಡದೇ ತಮ್ಮ ಹೆಚ್ಚಿನ ಸಮಯವನ್ನು ಶ್ವಾಸ ಕೇಂದ್ರದಲ್ಲೇ ಕಳೆಯುತ್ತಿದ್ದಾರೆ. ಪಂಚಮಸಾಲಿ ಪೀಠದ ಧಾರ್ಮಿಕ ಮತ್ತು ಸಾಮಾಜಿಕ ಕಾರ್ಯಕ್ರಮಗಳಲ್ಲಿ ಆಸಕ್ತಿ ತೋರಿಸುತ್ತಿರಲಿಲ್ಲ. ಇದು ಭಕ್ತರ ಮತ್ತು ಸಮಾಜದ ಎಲ್ಲಾ ಜನರ ಬೇಸರಕ್ಕೆ ಕಾರಣವಾಗಿತ್ತು.

2026ನೇ ಸಾಲಿನ ಹರಜಾತ್ರೆಯನ್ನು ಹರಿಹರದಲಿ ಆಯೋಜಿಸಿದಾಗ ಹರಜಾತ್ರೆ ಹೆಸರಿನಲ್ಲಿ ವಚನಾನಂದ ಸ್ವಾಮೀಜಿಯವರು ಭಕ್ತರಿಂದ ಮತ್ತು ಹಲವಾರು ಜನರಿಂದ ಲಕ್ಷಾಂತರ ರೂಪಾಯಿ ಹಣ ಪಡೆದಿದ್ದು, ಇದನ್ನು ಟ್ರಸ್ಟ್ ಸದಸ್ಯರು ಮತ್ತು ಆಡಳಿತ ಮಂಡಳಿಯವರ ಗಮನಕ್ಕೆ ತಂದಿಲ್ಲ. ಭಕ್ತರಿಂದ ಹಣ ಪಡೆದ ಬಗ್ಗೆ ಯಾವುದೇ ರಸೀದಿಯನ್ನೂ ಕೊಡದೇ ತಮ್ಮ ವೈಯಕ್ತಿಕ ಕೆಲಸಕ್ಕೆ ಬಳಸಿಕೊಂಡಿದ್ದು, ನಂತರ ಭಕ್ತರು ತಾವು ನೀಡಿದ ಹಣಕ್ಕೆ ರಸೀದಿ ಬೇಕೆಂದು ಶ್ರೀಗಳನ್ನು ಕೇಳಿದಾಗ ಸೂಕ್ತ ಉತ್ತರ ನೀಡದೇ ಅವರಿಗೆ ಅವಾಚ್ಯವಾಗಿ ಬೈದಿದ್ದಾರೆ.

ಬಳಿಕ ಭಕ್ತರಿಂದ ಪಡೆದ ಹಣವನ್ನು ಟ್ರಸ್ಟ್‌ಗೆ ಕೊಡದೇ ಬೆಂಬಲಿಗರ ಜೊತೆ ಮಠದ ಆವರಣದಲ್ಲಿ ಗೊಂದಲ ಸೃಷ್ಟಿಸಿ ಭಕ್ತರಲಿ ಆತಂಕ ಉಂಟುಮಾಡಿದ್ದಾರೆ.

ಆದ್ದರಿಂದ ಸುದೀರ್ಘ ಚರ್ಚೆಯ ನಂತರ ವಚನಾನಂದ ಶ್ರೀಗಳನ್ನು ಜಗದ್ಗುರು ಸ್ಥಾನದಿಂದ ಪದಚ್ಯುತಿಗೊಳಿಸಿದ್ದೇವೆ. ಶ್ರೀಗಳು ಹರ ಜಾತ್ರೆ ಹೆಸರಿನಲ್ಲಿ ಭಕ್ತರಿಂದ ಪಡೆದ ಹಣವನ್ನು ತಮ್ಮ ವೈಯಕ್ತಿಕ ಖಾತೆಗಳಿಗೆ ವರ್ಗಾಯಿಸಿಕೊಂಡು ಟ್ರಸ್ಟ್ ಮತ್ತು ಮಠಕ್ಕೆ ಮೋಸ, ನಂಬಿಕೆ ದ್ರೋಹ ಮಾಡಿದ್ದಾರೆ ಎಂದು ದೂರಲಾಗಿದೆ.

## ಮಹಿಳಾ ಮೀಸಲಾತಿ ಮಸೂದೆಯನ್ನು ವಿಪಕ್ಷಗಳು ಸೋಲಿಸಿ ಮೂಲೆಗುಂಪು ಮಾಡಿವೆ: ಬಿ.ವೈ.ರಾಘವೇಂದ್ರ

**ಶಿವಮೊಗ್ಗ,ಏ.20**–ಲೋಕಸಭೆಯಲ್ಲಿ ವಿರೋಧ ಪಕ್ಷಗಳು ಮಹಿಳಾ ಮೀಸಲಾತಿ ಮಸೂದೆಯನ್ನು ಸೋಲಿಸಿ ಮೂಲೆಗುಂಪು ಮಾಡಿದವು ಎಂದು ಸಂಸದ ಬಿ.ವೈ. ರಾಘವೇಂದ್ರ ಟೀಕಿಸಿದರು.

ಶಿವಮೊಗ್ಗದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಸವಣ್ಣನವರ ವಿಚಾರಗಳಿಗೆ, ಸ್ತ್ರೀ ಸ್ವಾತಂತ್ರ್ಯಕ್ಕೆ ತಣ್ಣೀರೆರಚುವ ಕೆಲಸ ಕಾಂಗ್ರೆಸ್ ನೇತೃತ್ವದಲ್ಲಿ ನಡೆದಿದೆ. ಅದಕ್ಕೆ ಕೈ ಜೋಡಿಸುವ ಕೆಲಸವನ್ನು ಟಿಎಂಸಿ, ಡಿಎಂಕೆ ಮಾಡಿದವು ಎಂದರು.



ಯಾವುದೇ ವಿಧೇಯಕವನ್ನು ಜಾರಿ ಮಾಡಬೇಕಾದರೆ ಸಂವಿಧಾನದ ಪ್ರಕಾರ ಎರಡನೇ ಮೂರರಷ್ಟು ಬಹುಮತ ಬೇಕಾಗುತ್ತದೆ. ಆದರೆ, ಮೂರು ವಿಧೇಯಕಗಳ ಜಾರಿಗೆ ವಿರೋಧ ಪಕ್ಷಗಳು ವಿರೋಧ ಮಾಡಿದವು. ಮಹಿಳಾ ಶಕ್ತಿಯನ್ನು ಲೋಕಸಭೆ ಹಾಗೂ ವಿಧಾನಸಭೆಯಲ್ಲಿ ನೋಡಲು ಸಾಧ್ಯವಿದೆ. ಆದರೆ, ವಿರೋಧ ಪಕ್ಷ ಸುಳ್ಳು ಹೇಳಿ ವಿಧೇಯಕ ಜಾರಿ ಮಾಡಲು ಬಿಡಲಿಲ್ಲ ಎಂದು ಹೇಳಿದರು.

ವಿರೋಧ ಪಕ್ಷಗಳು ದುರುದ್ದೇಶದಿಂದ ಐತಿಹಾಸಿಕ ಮಸೂದೆಯನ್ನು ಸೋಲಿಸಿದವು. ದೇಶದ ಎಲ್ಲಾ ತಾಯಂದಿರಿಗೆ, ಸೋದರಿಯರಿಗೆ ಪ್ರಧಾನ ಮಂತ್ರಿಗಳು ದುಃಖದಿಂದ ಕ್ಷಮೆ ಕೇಳಿದ್ದಾರೆ. ಮಹಿಳೆ ಏನು ಬೇಕಾದರೂ ಮರೆಯಬಹುದು. ಆದರೆ, ಅವಮಾನವನ್ನು ಮರೆಯಲಾರಳು ಎಂದು ತಿಳಿಸಿದರು.

ಇನ್ನು, ನಮ್ಮ ಮಲೆನಾಡಿನ ಭೌಗೋಳಿಕ ಪ್ರದೇಶ ವಿಸ್ತಾರವಾಗಿದೆ. ಆದರೆ, ವಿಧಾನಸಭಾ ಕ್ಷೇತ್ರ ಮಾಡಲು ಸಂಖ್ಯೆಯ ಕೊರತೆ ಇದ್. ಈ ಸಂದರ್ಭದಲ್ಲಿ ಪಶ್ಚಿಮ ಘಟ್ಟಕ್ಕೆ ವಿಶೇಷ ಮಾನ್ಯತೆ ಕೊಟ್ಟು, ಜನಸಂಖ್ಯೆಯನ್ನು ಮುಖ್ಯವಾಗಿಟ್ಟುಕೊಳ್ಳದೇ ಇಲ್ಲೂ ಸಹ ವಿಧಾನಸಭಾ ಕ್ಷೇತ್ರ ಮಾಡಬೇಕು. ಅದರಲ್ಲೂ ವಿಶೇಷವಾಗಿ ಹೊಸನಗರ ಭಾಗದ ಹೋರಾಟಗಾರರ ಧ್ವನಿಯಾಗಿ ಈ ಬಗ್ಗೆ ನಾನು ಸದನದಲ್ಲಿ ಮಾತನಾಡಿದ್ದೇನೆ ಎಂದೂ ಹೇಳಿದರು.

## ಪ್ರತ್ಯೇಕ ಘಟನೆ: ನೀರಿನಲ್ಲಿ ಮುಳುಗಿ ನಾಲ್ವರು ಸಾವು



■ ಕನ್ನಡ ಮಾತೃ ಭೂಮಿ ವಾರ್ತೆ

**ಹಾಸನ/ಮೈಸೂರು,ಏ.20**–ಹಾಸನ ಜಿಲ್ಲೆಯ ಅರಸೀಕೆರೆ ತಾಲೂಕಿನಲ್ಲಿ ಜಾನುವಾರು ಮೈ ತೊಳೆಯಲು ಹೋಗಿ ಕೆರೆಯಲ್ಲಿ ಮುಳುಗಿ ಅಳಿಯ ಮತ್ತು ಮಾವ ಮೃತಪಟ್ಟರೆ, ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲೂಕಿನಲ್ಲಿ ಈಜಲು ಹೋಗಿ ಇಬ್ಬರು ಮೃತಪಟ್ಟ ಘಟನೆ ನಡೆದಿದೆ.

ಘಟನೆ 1: ಅರಸೀಕೆರೆ ತಾಲೂಕಿನ ಗಂಡಸಿ ಹೋಬಳಿಯ ನಿಲಗುಂದ-ಹೊಸಳ್ಳಿ ಗ್ರಾಮದ ಕೆರೆಯಲ್ಲಿ ಜಾನುವಾರುಗಳ ಮೈ ತೊಳೆಯುತ್ತಿದ್ದ ವೇಳೆ ಏಕಾಏಕಿ ಕಾಲು ಜಾರಿದ್ದು ಪ್ರತೀಕ್ (10) ಹಾಗೂ ಪ್ರಭಾಕರ್ (45) ಈಜು ಬರದೇ ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ.

ಬೇಸಿಗೆ ರಜೆ ಹಿನ್ನೆಲೆ, ಪ್ರತೀಕ್ ರಜೆಗಾಗಿ ಮಾವ ಪ್ರಭಾಕರನ ಮನೆಗೆ ಬಂದಿದ್ದ. ಮಾವ ಮತ್ತು ಅಳಿಯ ಜಾನುವಾರುಗಳ ಮೈ ತೊಳೆಯಲು ಕೆರೆಗೆ ತೆರಳಿದ್ದರೆ, ಉಳಿದ ಕುಟುಂಬಸ್ಥರು ಕೃಷಿ ಚಟುವಟಿಕೆ ನಿಮಿತ್ತ ಗದ್ದೆಗೆ ತೆರಳಿದ್ದರು. ಈ ವೇಳೆ ಅವಘಡ ಸಂಭವಿಸಿದೆ. ಘಟನೆಯಿಂದ ಸ್ಥಳೀಯರಿಗೆ ಆಘಾತ ವ್ಯಕ್ತವಾಗಿದ್ದು, ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಗಂಡಸಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಘಟನೆ 2: ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲೂಕಿನ ದೊಡ್ಡ ಹರವೆ ಸಮೀಪದ ಕಾವೇರಿ ನದಿಯಲ್ಲಿ ಈಜಲು ತೆರಳಿದ್ದ ಗಣೇಶ್ (22) ಹಾಗೂ ಇಮ್ರಾನ್ (28) ಎಂಬ ಇಬ್ಬರು ಯುವಕರು ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ.

ಮೃತರಿಬ್ಬರೂ ಪಟ್ಟಣದಲ್ಲಿ ಟೈಲ್ಸ್ ಮತ್ತು ಪೇಂಟಿಂಗ್ ಕೆಲಸ ಮಾಡುತ್ತಿದ್ದರು. ಭಾನುವಾರ ಮಧ್ಯಾಹ್ನ ನಾಲ್ವರು ಸ್ನೇಹಿತರು ಈಜಲು ನದಿಗೆ ತೆರಳಿದ್ದರು. ಈ ವೇಳೆ ಅಕಸ್ಮಾತ್ ನೀರಿನ ಪ್ರವಾಹಕ್ಕೆ ಸಿಲುಕಿ ಗಣೇಶ್ ಮತ್ತು ಇಮ್ರಾನ್ ನೀರುಪಾಲಾಗಿದ್ದಾರೆ. ಗಣೇಶನ ಮೃತದೇಹ ನಿನ್ನೆ ಸಂಜೆಯೇ ಪತ್ತೆಯಾಗಿದ್ದರೆ, ಇಮ್ರಾನ್‌ನ ಶವ ಪತ್ತೆಯಾಗಿರಲಿಲ್ಲ. ಇಂದು ಬೆಳಗ್ಗೆ ಶೋಧ ಕಾರ್ಯ ನಡೆಸಿ ಇಮ್ರಾನ್‌ನ ಶವವನ್ನು ಪತ್ತೆ ಹಚ್ಚಲಾಗಿದೆ. ಘಟನೆಯ ಕುರಿತು ಬೈಲಕುಪ್ಪೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಚಿಕ್ಕಮಗಳೂರು: ವನ್ಯಜೀವಿಗಳಿಂದ ಬೆಳೆ ಹಾನಿ, ಶೀಘ್ರ ಪರಿಹಾರ ನೀಡಲು ಸಚಿವ ಖಂಡ್ರೆ ಸೂಚನೆ

**ವಚಿಕ್ಕಮಗಳೂರು,ಏ.20**–ಜಿಲ್ಲೆಯ ಕೊಪ್ಪದಲ್ಲಿ ಆನೆ ಸೆರೆ ತಂಡ ಸ್ಥಾಪನೆ ಕಾರ್ಯ ಸಾಧ್ಯ ವರದಿ ಕೇಳಿದ ಸಚಿವ ಈಶ್ವರ ಖಂಡ್ರೆ, ವನ್ಯ ಜೀವಿಗಳಿಂದ ಬೆಳೆ ಹಾನಿ, ಶೀಘ್ರ ಪರಿಹಾರ ನೀಡಲು ಸೂಚಿಸಿದ್ದಾರೆ.



ಚಿಕ್ಕಮಗಳೂರು ಜಿಲ್ಲೆಯಲ್ಲಿ ವನ್ಯ ಜೀವಿಗಳಿಂದ ಬೆಳೆ ಹಾನಿಯ ದೂರು ಬಂದ ಕೂಡಲೇ ಸ್ಥಳಕ್ಕೆ ಭೇಟಿ ನೀಡಿ, ಜಿಪಿಎಸ್ ಚಿತ್ರ ಸಹಿತ ಹಾನಿಯ ನಿರ್ಧರಣೆ ಮಾಡಿ, ತ್ವರಿತವಾಗಿ ಪರಿಹಾರ ಒದಗಿಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಸೂಚಿಸಿದ್ದಾರೆ.

ಚಿಕ್ಕಮಗಳೂರಿನಲ್ಲಿ ಭಾನುವಾರ ಅರಣ್ಯಾಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಆನೆ, ಕಾಡೆಮ್ಮೆ, ಕಾಡುಕೋಣ, ಹಂದಿಗಳಿಂದ ತೀವ್ರ ಬೆಳೆ ಹಾನಿ ಆಗುತ್ತಿದ್ದು, ಅಧಿಕಾರಿಗಳು ವಿಳಂಬ ಮಾಡದೆ ರೈತರಿಗೆ ಪರಿಹಾರ ನೀಡಬೇಕು. ಪ್ರಾಮಾಣಿಕವಾಗಿ ಬೆಳೆ ಹಾನಿಯ ನಿರ್ಧಾರ ಮಾಡಬೇಕು ಎಂದರು.

ಪ್ರಸ್ತುತ ವೃತ್ತಕ್ಕೆ 1 ಕೋಟಿ ರೂ. ಹಣ ಬಿಡುಗಡೆಯಾಗಿದ್ದು, ಬಾಕಿ ಇರುವ ಎಲ್ಲ ಬೆಳೆ ಹಾನಿ ಪರಿಹಾರ ನೀಡುವಂತೆ ಸೂಚಿಸಿದ ಅವರು, ಆನೆ ನಿಗ್ರಹ ಕಂದಕ, ಸೌರ ತಂತಿ ಬೇಲಿಗಳ ಸಮರ್ಪಕ ನಿರ್ವಹಣೆ ಮಾಡುವಂತೆಯೂ ತಿಳಿಸಿದರು.

ಆನೆ ಸೆರೆ ತಂಡ: ಮೂಡಿಗೆರೆ, ಕೊಪ್ಪ ಮೊದಲಾದ ಕಡೆಗಳಲ್ಲಿ ಆನೆ ಹಾವಳಿ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಈ ಭಾಗದಲ್ಲೇ ಒಂದು ಆನೆ ಸೆರೆ ಕಾರ್ಯತಂಡ ಸ್ಥಾಪಿಸುವ ಬಗ್ಗೆ ಪರಿಶೀಲಿಸಿ, ಕಾರ್ಯಸಾಧ್ಯ ವರದಿ ಕೇಳಿದ ಸಚಿವರು, ಹೊಸದಾಗಿ ಮಾಡಿರುವ ಆನೆ ಕಾರ್ಯಪಡೆ ಹೇಗೆ ಕಾರ್ಯ ನಿರ್ವಹಿಸುತ್ತಿದೆ ಎಂಬ ಬಗ್ಗೆಯೂ ವರದಿ ಸಲ್ಲಿಸಲು ತಿಳಿಸಿದರು.

ರೈಲ್ವೆ ಬ್ಯಾರಿಕೇಡ್ ಅಧ್ಯಯನ ಅಗತ್ಯ: ತಾವು ಸಚಿವರಾದ ತರುವಾಯ, ಮುಖ್ಯಮಂತ್ರಿಗಳಿಗೆ ಮನವಿ ಮಾಡಿ ಆನೆಗಳ ಉಪಟಳ ಇರುವ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಹೆಚ್ಚುವರಿ ರೈಲ್ವೆ ಬ್ಯಾರಿಕೇಡ್ ಅಳವಡಿಕೆಗೆ ಹಣ ಮಂಜೂರು ಮಾಡಿಸಿದ್ದು, ಕಾಮಗಾರಿಯೂ ಆಗಿದೆ. ಯಾವ ಯಾವ ವಲಯದಲ್ಲಿ ಎಷ್ಟು ಕಿಲೋ ಮೀಟರ್ ಬ್ಯಾರಿಕೇಡ್ ಹಾಕಲಾಗಿದೆ ಮತ್ತು ಬ್ಯಾರಿಕೇಡ್ ಅಳವಡಿಸಿದ ತರುವಾಯ ಆನೆ, ಕಾಡು ಕೋಣ ಹಾವಳಿ ಕಡಿಮೆ ಆಗಿದೆಯೇ ಎಂಬ ಬಗ್ಗೆ ಅಧಿಕಾರಿಗಳ ತಂಡ ಅಧ್ಯಯನ ನಡೆಸಿ ವರದಿ ಸಲ್ಲಿಸಬೇಕು ಎಂದರು.

ವನ್ಯಜೀವಿಗಳ ಸಾವಿಗೆ ಕಾರಣವಾಗುವ ಉರುಳು ಅಳವಡಿಸಿರುವ ತೋಟಗಳ ಪರಿಶೀಲನೆ ನಡೆಸುವಂತೆ ತಿಳಿಸಿದ ಈಶ್ವರ ಖಂಡ್ರೆ, ಹೊರಗುತ್ತಿಗೆ ಸಿಬ್ಬಂದಿಗೆ ಅಗತ್ಯ ಉಪಕರಣ, ನಿಯಮಿತವಾಗಿ ವೇತನ, ಭತ್ಯೆ ಪಾವತಿಸಲು ಸೂಚಿಸಿದರು.

ಕಳಸದಲ್ಲಿ ಕಾಡು ಕೋಣದ ದಾಳಿಗೆ ಕೂಲಿ ಕಾರ್ಮಿಕ ಸಾವಿಗೀಡಾಗಿರುವ ಬಗ್ಗೆ ತೀವ್ರ ನೋವು ವ್ಯಕ್ತಪಡಿಸಿದ ಸಚಿವರು, ಕಾಡುಕೋಣ ಸೆರೆ ತರಬೇತಿ ಪಡೆದಿರುವ ಸಿಬ್ಬಂದಿಗಳನ್ನು ಸಮಸ್ಯೆ ಇರುವ ಪ್ರದೇಶಕ್ಕೆ ನಿಯೋಜಿಸಿ ಜನರ ಅಮೂಲ್ಯ ಪ್ರಾಣ ಉಳಿಸುವಂತೆ ತಿಳಿಸಿದರು.

ಸಭೆಯಲ್ಲಿ ಶಾಸಕರುಗಳಾದ ರಾಜೇಗೌಡ, ತಮ್ಮಯ್ಯ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಪುಲಕಿತ್ ಮೀನಾ, ರಮೇಶ್ ಬಾಬು ಮತ್ತಿತರರು ಪಾಲ್ಗೊಂಡಿದ್ದರು.

ಒಂಟಿ ಸಲಗ ಪ್ರತ್ಯಕ್ಷ: ಕಾಫಿನಾಡಿನ ಮಲೆನಾಡು ಭಾಗದಲ್ಲಿ ಕಾಡಾನೆ ಭೀತಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಲೇ ಇದ್ದು, ಜನ ಆತಂಕದಲ್ಲೇ ಬದುಕುವಂತಾಗಿದೆ. ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ದೇವನಗೂಲ್ ಸಮೀಪದ ಗುಡ್ಡಗಾಡು ಗ್ರಾಮದ ರಸ್ತೆಯಲ್ಲಿ ಒಂಟಿ ಸಲಗವೊಂದು ಪ್ರತ್ಯಕ್ಷವಾಗಿ ಸ್ಥಳೀಯರಲ್ಲಿ ತೀವ್ರ ಆತಂಕ ಮೂಡಿಸಿದೆ.

ಇಏಐಓಓಅಖಅಎಅಔಖ್ಕಿಖಿ ಇಣಖಕಉಫೆ ಖಅಖಐಣಫೆ ಊಣ್ಕ ಇ್ಕಣಕ ಈಅಖಅಎಉ ಗಐಔಈ ಉಔಉಕಏಅಫೆಖ ಕಾಡಾನೆ

ಕಳೆದ ಮೂರ್ನಾಲ್ಕು ದಿನಗಳಿಂದ ಇದೇ ಗ್ರಾಮದ ಸುತ್ತಮುತ್ತಲ ಪ್ರದೇಶಗಳಲ್ಲಿ ಬೀಡು ಬಿಟ್ಟಿರುವ ಈ ಸಲಗವು, ಎರಡು ದಿನದ ಹಿಂದಷ್ಟೇ ಮನೆಯೊಂದರ ಬಳಿ ಬಂದು ಕೆಲಕಾಲ ಆತಂಕ ಸೃಷ್ಟಿಸಿ ನಂತರ ಅಲ್ಲಿಂದ ತೆರಳಿತ್ತು. ಇದೀಗ ಆನೆಯೂ ಕಾಡಿನೊಳಗೆ ಕಣ್ಮರೆಯಾಗಿದ್ದರೂ ಸಹ, ಮುಂಜಾನೆಯ ಅವಧಿಯಲ್ಲಿ ಕೆಲಸ ಕಾರ್ಯಗಳಿಗಾಗಿ ತೋಟಗಳಿಗೆ ತೆರಳುವ ಕಾರ್ಮಿಕರು ಹಾಗೂ ಸಾರ್ವಜನಿಕರು ಭಯಭೀತರಾಗಿದ್ದಾರೆ.

ಗ್ರಾಮದ ರಸ್ತೆಯಲ್ಲೇ ಆನೆ ಓಡಾಡುತ್ತಿರುವುದರಿಂದ ಅನಾಹುತ ಸಂಭವಿಸುವ ಮೊದಲು ಅರಣ್ಯ ಇಲಾಖೆ ಎಚ್ಚೆತ್ತುಕೊಂಡು, ತಕ್ಷಣವೇ ಈ ಒಂಟಿ ಸಲಗವನ್ನು ಕಾಡಿಗಟ್ಟಲು ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯ ನಿವಾಸಿಗಳು ತೀವ್ರವಾಗಿ ಆಗ್ರಹಿಸಿದ್ದಾರೆ.

ಆಲ್ದೂರು ಅರಣ್ಯ ವ್ಯಾಪ್ತಿಯಲ್ಲಿರುವ ಮಾವಿನಗುಣಿ ಸುತ್ತಮುತ್ತ ಎರಡು ಕಾಡಾನೆಗಳು ಕಾಣಿಸಿಕೊಂಡಿವೆ. ಈ ಹಿನ್ನೆಲೆಯಲ್ಲಿ ಕಾಫಿ ತೋಟಗಳಲ್ಲಿ ಕೆಲಸ ಮಾಡುವ ಕಾರ್ಮಿಕರು, ರೈತರು ಮತ್ತು ಸಾರ್ವಜನಿಕರು ತೀವ್ರ ಜಾಗರೂಕರಾಗಿರಬೇಕೆಂದು ಸುತ್ತಮುತ್ತಲಿನ ಗ್ರಾಮಗಳಲ್ಲಿ ಮೈಕ್ ಮೂಲಕ ಅರಣ್ಯ ಇಲಾಖೆಯವರು ಎಚ್ಚರಿಕೆ ನೀಡಿದ್ದಾರೆ.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L